ವಿಜಯಪುರ | ಸಂಪುಟ 04 | ಸಂಚಿಕೆ 053 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಏಪ್ರಿಲ್, 14, 2026



"ನಾವು ಮೈತ್ರಿ ಪಕ್ಷದ ಹೊಂದಾಣಿಕೆಯಲ್ಲಿ ಇದ್ದೇವೆ. ದೆಹಲಿ ಬಿಜೆಪಿ ಹೈಕಮಾಂಡ್ ನಾಯಕರು, ರಾಜ್ಯ ನಾಯಕರು ನಾವೆಲ್ಲ ಜೊತೆಗೂಡಿ ಮುಂದಿನ ದಿನಗಳಲ್ಲಿ ವಿಧಾನಸೌಧಕ್ಕೆ ಬರೋದಕ್ಕೆ ಜನತೆ ಆಶೀರ್ವಾದದಿಂದ ಪ್ರಯತ್ನ ಪಡುತ್ತೇವೆ. 2028 ರಲ್ಲಿ ರಾಜ್ಯದಲ್ಲಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ."

■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

# ನಾರಿಶಕ್ತಿ ವಂದನ್ ಕಾಯ್ದೆಯಿಂದ ಶಾಸನ ಸಭೆಗಳಲ್ಲಿ ಮಹಿಳಾ ಮೀಸಲಾತಿ



■ ಉದಯರಶ್ಮಿ ದಿನಪತ್ರಿಕೆ

## ವಿಜಯಪುರದಲ್ಲಿ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ಡಾ.ವಿಜಯಲಕ್ಷ್ಮಿ ತುಂಗಳ ಶ್ಲಾಘನೆ

ವಿಜಯಪುರ: ಶಾಸನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಕಲ್ಪಿಸುವ ಮಹತ್ವದ ಈ ಹಿಂದಿನ ದಿನಗಳಲ್ಲಿ ಚರ್ಚೆ ಬಂದಾಗ ಮಸೂದೆಯ ಪ್ರತಿಯನ್ನೇ ಹರಿದು ಹಾಕಿದ್ದರು, ಮಹಿಳೆಯಿಂದ ಆಡಳಿತ ಅಸಾಧ್ಯ ಎನ್ನುವ ಮನೋಭಾವನೆ ಇತ್ತು, ಆದರೆ ಮಹಿಳೆ ಸಬಲಳು, ಆಕೆ ಆಡಳಿತ ನಡೆಸಲು ಸಮರ್ಥಳು ಎಂಬ ಸಕಾರಾತ್ಮಕ ಭಾವ ಮೂಡಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಯಶಸ್ವಿಯಾಗಿದ್ದು, ನಾರಿಶಕ್ತಿ ವಂದನ್ ಕಾಯ್ದೆಯ ಮೂಲಕ ಶಾಸನ ಸಭೆಗಳಲ್ಲಿ ಮಹಿಳಾ ಮೀಸಲಾತಿಗೆ ಅಪೂರ್ವ ಹೆಜ್ಜೆ ಇರಿಸಿದ್ದಾರೆ ಎಂದು ಬಿಜೆಪಿ ಮಹಿಳಾ ಮೋರ್ಚಾ ರಾಜ್ಯ ಉಪಾಧ್ಯಕ್ಷೆ ಡಾ.ವಿಜಯಲಕ್ಷ್ಮಿ ತುಂಗಳ ಹೇಳಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿವರಣೆ ನೀಡಿದ ಅವರು, ಮಹಿಳೆಯನ್ನು ಸಶಕ್ತಗೊಳಿಸುವ ನಿಟ್ಟಿನಲ್ಲಿ ಪ್ರಧಾನಿ ಮೋದಿ ಅವರು ಅವರು ಅನೇಕ ಕಾರ್ಯಕ್ರಮ ಕೈಗೊಂಡರು, ಬೇಟಿ ಬಚಾವೋ ಬೇಟಿ ಪಡಾವೋ, ಉದ್ಯೋಗದಲ್ಲಿ ಮಹಿಳೆಯ ಸಿಂಹಪಾಲು ಹೀಗೆ ನಾನಾ ರೀತಿಯ ಕ್ರಮಗಳಿಂದಾಗಿ ಸ್ತ್ರೀ ಶಕ್ತಿ ಇನ್ನಷ್ಟೂ ಬಲಗೊಳ್ಳಲು ಸಾಧ್ಯವಾಗಿದೆ ಎಂದರು.

ಮಹಿಳಾ ಶಿಕ್ಷಣಕ್ಕೆ ಕೇಂದ್ರ ಸರ್ಕಾರ ನೀಡುತ್ತಿರುವ ಪ್ರೋತ್ಸಾಹ ಫಲವಾಗಿ ಉನ್ನತ ಮಟ್ಟದಲ್ಲಿದ್ದು, ಅಮೇರಿಕೆಯಲ್ಲಿ ಮಹಿಳೆಯರ ಉನ್ನತ ಶಿಕ್ಷಣ ಅಧ್ಯಯನ ಪ್ರಮಾಣ ಶೇ.34 ರಷ್ಟಿದ್ದರೆ, ನಮ್ಮ ಭಾರತದಲ್ಲಿ ಶೇ43 ರಷ್ಟು ಪ್ರಮಾಣದಲ್ಲಿ ಮಹಿಳೆ ಉನ್ನತ ಶಿಕ್ಷಣ ಪಡೆದುಕೊಳ್ಳುತ್ತಿದ್ದಾರೆ, ಭಾರತದಲ್ಲಿ ಅತೀ ಹೆಚ್ಚು ಅಂದರೆ ಶೇ.15 ರಷ್ಟು ಪ್ರಮಾಣದಲ್ಲಿ ಮಹಿಳಾ ಪೈಲೆಟ್‌ಗಳಿದ್ದಾರೆ, ಉಗ್ರಗಾಮಿಗಳಿಗೆ ತಕ್ಕ ಪಾಠ ಕಲಿಸುವ ಆಪರೇಷನ್ ಸಿಂಧೂರ ಕಾರ್ಯಾಚರಣೆ ವಹಿಸಿದ್ದೂ ಸಹ ಮಹಿಳೇಯರೇ, ಈ ರೀತಿ ಮಹಿಳೆ ಸಬಲೀಕರಣದ ದಾರಿಯಲ್ಲಿ ಶರವೇಗದಲ್ಲಿ ಸಾಗಿದ್ದಾಳೆ ಎಂದರು.

ಭ್ರೂಣ ಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಂಡ ದಿಟ್ಟ ಕ್ರಮಗಳಿಂದಾಗಿಯೇ ಲಿಂಗಾನುಪತದಲ್ಲಿದ್ದ ವ್ಯತ್ಯಾಸ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿ ಲಿಂಗಾನುಪಾತ ಸರಿಸಮ ಹಂತಕ್ಕೆ ತಲುಪಿದೆ ಎಂದರು.

ಶಾಸನ ಸಭೆಗಳಲ್ಲಿ ಶೇ.33 ರಷ್ಟು ಮೀಸಲಾತಿ ಕಲ್ಪಿಸುವ ನಾರಿಶಕ್ತಿ ವಂದನ್ ಕಾಯ್ದೆ ಜಾರಿ ಒಂದು ಬದಲಾವಣೆಯ ಪರ್ವ, 20 ಕ್ಕೂ ಹೆಚ್ಚು ರಾಜ್ಯಗಳಲ್ಲಿ ಶೇ.40 ಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆ ಸಮರ್ಥವಾಗಿ ಆಡಳಿತ ಯಂತ್ರವನ್ನು ಮುನ್ನಡೆಸುತ್ತಿದ್ದಾರೆ ಎಂದರು.

ಈ ಹಿಂದೆ ಸ್ತ್ರೀಯರ ಹೆಸರಿನಲ್ಲಿ ಆಸ್ತಿ ಇರುವುದೇ ಅಪರೂಪವಾಗಿತ್ತು, ಆದರೆ ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಆವಾಸ್ ಯೋಜನೆಯ ಮೂಲಕ ಶೇ.80 ರಷ್ಟು ಮಹಿಳೆಯರಿಗೆ ಆಯಾ ಮನೆಯ ಮಾಲೀಕತ್ವ ನೀಡಿರುವುದು ಒಂದು ಅಪೂರ್ವ ಹೆಜ್ಜೆ ಎಂದರು.

ಆಡಳಿತದಲ್ಲಿ ಮಹಿಳಾ ಪ್ರಾತಿನಿಧ್ಯ ಹೆಚ್ಚಾಗಬೇಕಿದೆ, ಮಹಿಳೆಯರಿಗೆ ಮತದಾನದ ಹಕ್ಕು ನೀಡಿದ ಡಾ.ಅಂಬೇಡ್ಕರ ಅವರನ್ನು ಪ್ರತಿನಿತ್ಯ ನೆನೆಯಬೇಕು, ಈ ಮತದಾನದ ಹಕ್ಕಿನ ಬಲದಿಂದಲೇ ಆಡಳಿತದಲ್ಲಿ ಒಳಗೊಳ್ಳುವಿಕೆ ಸಾಧ್ಯವಾಗಿದೆ ಎಂದರು.

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ, ಪಾಲಿಕೆ ಸದಸ್ಯೆ ಸ್ವಪ್ನಾ ಕಣಮುಚನಾಳ ಮಾತನಾಡಿ, ಈ ಮಹತ್ವದ ಕಾಯ್ದೆ ಜಾರಿಗೊಳಿಸಿದ ಪ್ರಧಾನಿ ಅವರನ್ನು ಅಭಿನಂದನೆ ನೀಡಲು ಮಿಸ್ ಕಾಲ್ ನೀಡುವ ಅಭಿಯಾನವನ್ನು ವಿಜಯಪುರದಲ್ಲಿ ಕೈಗೊಳ್ಳಲಾಗುತ್ತಿದೆ,

ಶಿಲ್ಪಾ ಕುದರಗೊಂಡ, ಗೀತಾ ಚೌಧರಿ, ಈರಣ್ಣ ರಾವೂರ, ವಿಜಯ ಜೋಶಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ದೆಹಲಿಗೆ ಹಾರಿದ 'ಕೈ' ಶಾಸಕರಿಗೆ ಡಿಸಿಎಂ ಖಡಕ್ ಎಚ್ಚರಿಕೆ!

## ಸಂಪುಟ ಪುನಾರಚನೆ ಕಸರತ್ತು | ಅನಾವಶ್ಯಕ ಗೊಂದಲ ಸೃಷ್ಟಿಸದಂತೆ ವಾರ್ನಿಂಗ್ | ಪಕ್ಷದ ಶಿಸ್ತು ಮೀರದಿರಲು ಸಲಹೆ



ಬೆಂಗಳೂರು: ಸಂಪುಟ ಪುನಾರಚನೆ ಮತ್ತು ಮಂತ್ರಿ ಸ್ಥಾನಕ್ಕೆ ದೆಹಲಿಗೆ ತೆರಳಿರುವ ಕಾಂಗ್ರೆಸ್ ಶಾಸಕರಿಗೆ ಡಿಸಿಎಂ ಡಿಕೆ ಶಿವಕುಮಾರ್ ಶಾಕ್ ನೀಡಿದ್ದು, ಅನಾವಶ್ಯಕ ಗೊಂದಲ ಸೃಷ್ಟಿಸದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ 3 ವರ್ಷ ತುಂಬಿದ ಹಿನ್ನಲೆಯಲ್ಲಿ ಸಂಪುಟ ಪುನಾರಚನೆ ಮಾಡಬೇಕು ಮತ್ತು ಬೇರೆ ಶಾಸಕರಿಗೂ ಮಂತ್ರಿಯಾಗುವ ಅವಕಾಶ ನೀಡಬೇಕು ಎಂದು ಆಗ್ರಹಿಸಿ ಕಾಂಗ್ರೆಸ್ ನ ಕೆಲ ಶಾಸಕರ ಗುಂಪು ದೆಹಲಿಗೆ ಹಾರಿದೆ.

ಮಾಜಿ ಸಚಿವ ಟಿಬಿ ಜಯಚಂದ್ರ, ಅಶೋಕ್ ಪಠಾಣ್, ಎಸ್.ನಾರಾಯಣಸ್ವಾಮಿ, ಮತ್ತು ಕೆ.ಷಡಕ್ಷರಿ ಸೇರಿದಂತೆ ಹಲವು ಶಾಸಕರು ದೆಹಲಿಗೆ ಹೋಗಿದ್ದು ಅಲ್ಲಿ ಕಾಂಗ್ರೆಸ್ ಹೈಕಮಾಂಡ್ ಭೇಟಿ ಮಾಡಿ ತಮ್ಮ ಮನವಿ ಸಲ್ಲಿಸಲು ಮುಂದಾಗಿದ್ದಾರೆ.

ಈ ಕುರಿತು ದೆಹಲಿಯಲ್ಲಿ ಮಾತನಾಡಿದ್ದ ಟಿಬಿ ಜಯಚಂದ್ರ ಅವರು, 'ಇದು ನನಗೆ ನಿತ್ಯದ ಕೆಲಸ. ನಾನು ದೆಹಲಿಯಲ್ಲಿ ರಾಜ್ಯ ಪ್ರತಿನಿಧಿ. ವಿಧಾನಸಭಾ ಚುನಾವಣೆಯ ನಂತರ ನಾನು ಇಲ್ಲಿದ್ದೇನೆ. ಈಗ, ಇಂದು ನಾನು ಮಾತ್ರ ಬಂದಿದ್ದೇನೆ. ಅನೇಕ ಶಾಸಕರು ಸಹ ಬರುತ್ತಿದ್ದಾರೆ.

ನಾವು ಹೈಕಮಾಂಡ್ ಅನ್ನು ಭೇಟಿ ಮಾಡಿ ಪುನರ್ರಚನೆಗಾಗಿ ಮನವೊಲಿಸಲು ಬಯಸಿದ್ದೆವು, ಅದು ಅನೇಕ ಹಿರಿಯ ಶಾಸಕರ ಬೇಡಿಕೆಯಾಗಿದೆ, ಈ ಸರ್ಕಾರಕ್ಕೆ ಮೂರು ವರ್ಷಗಳ ಕಾಲ ಅವಕಾಶ ನೀಡಲಾಗಿದೆ. ಮೂರು ವರ್ಷಗಳು ಮುಗಿದಿವೆ, ಕೇವಲ ಎರಡು ವರ್ಷಗಳು ಮಾತ್ರ ಉಳಿದಿವೆ. ಅದಕ್ಕಾಗಿಯೇ ನಾವೆಲ್ಲರೂ ಹೆಚ್ಚಿನ ಬೇಡಿಕೆಯನ್ನು ಪೂರೈಸಲು ಬಯಸಿದ್ದೇವೆ ಎಂದು ಹೇಳಿದ್ದಾರೆ.

ಅಂತೆಯೇ ನಾಯಕತ್ವದ ವಿಚಾರದ ಬಗ್ಗೆ ಕೇಳಿದಾಗ ಉತ್ತರಿಸಿದ ಅವರು, "ಇಲ್ಲ, ಈ ನಾಯಕತ್ವದ ವಿಷಯ ನಮ್ಮ ಮುಂದೆ ಇಲ್ಲ. ಅದು ನಾಲ್ಕು ಗೋಡೆಗಳ ಒಳಗೆ ಇದೆ. ಸಿಎಂ, ಉಪ ಮುಖ್ಯಮಂತ್ರಿ ಮತ್ತು ಎಐಸಿಸಿ ಅಧ್ಯಕ್ಷರು ಮತ್ತು ರಾಹುಲ್ ಗಾಂಧಿ ಈ ಬಗ್ಗೆ ನಿರ್ಧರಿಸುತ್ತಾರೆ. ಪುನರ್ರಚನೆಗಾಗಿ ಹೈಕಮಾಂಡ್ ಅನ್ನು ಪ್ರಭಾವಿಸಲು ಅಥವಾ ವಿನಂತಿಸಲು ಮಾತ್ರ ನಾವು ಬಂದಿದ್ದೇವೆ ಎಂದು ಹೇಳಿದರು.

### ಡಿಕೆ ಶಿವಕುಮಾರ್ ಖಡಕ್ ಎಚ್ಚರಿಕೆ!



ಕೈ ಶಾಸಕರ ದೆಹಲಿ ಯಾತ್ರೆ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, 'ಪಕ್ಷದ ಹೈಕಮಾಂಡ್ ಅವರನ್ನು ಭೇಟಿ ಮಾಡುವುದರಲ್ಲಿ ಯಾವುದೇ ತಪ್ಪಿಲ್ಲ ಮತ್ತು ದೆಹಲಿಯಲ್ಲಿ ಕಾಂಗ್ರೆಸ್ ಶಾಸಕರ ಗುಂಪು ಹೈಕಮಾಂಡ್ ಅನ್ನು ಭೇಟಿ ಮಾಡುವ ಬಗ್ಗೆ ಅನಗತ್ಯ ಹೇಳಿಕೆಗಳನ್ನು ನೀಡದಂತೆ ಎಲ್ಲಾ ಶಾಸಕರಿಗೆ ಮನವಿ ಮಾಡುತ್ತೇನೆ' ಎಂದರು.

'ಪಕ್ಷದ ಶಿಸ್ತನ್ನು ಯಾರೂ ಮೀರಬೇಡಿ. ಪಕ್ಷದ ಚೌಕಟ್ಟಿನ ಒಳಗೆ ಎಲ್ಲಾ ಶಾಸಕರು ಮಾತನಾಡಬೇಕು. ಕೆಲವರು ಏನೇನು ಮಾತನಾಡಿದ್ದಾರೋ ಎಲ್ಲವನ್ನೂ ಗಮನಿಸಿದ್ದೇನೆ. ಆದರೆ ಮೀಡಿಯಾ ನಿಮ್ಮ ಭವಿಷ್ಯ ಅಲ್ಲ, ಪಾರ್ಟಿ ನಿಮ್ಮ ಭವಿಷ್ಯ. ಪಾರ್ಟಿಯಲ್ಲೇ ಎಲ್ಲರ ಭವಿಷ್ಯವಿದೆ, ಪಕ್ಷದ ಚೌಕಟ್ಟಿನೊಳಗೆ ಇರಬೇಕು. ಇದು ಸಂಪುಟ ಪುನಾರಚನೆ ಕೇಳುವ ಟೈಂ ಅಲ್ಲ. ಈಗ ಮಂತ್ರಿ ಮಾಡೋ ಟೈಂ ಅಲ್ಲ, ಮೊದಲು ಚುನಾವಣೆ ಮಾಡೋಣ ಎಂದು ಡಿಕೆಶಿ ಖಡಕ್ ಎಚ್ಚರಿಕೆ ನೀಡಿದ್ದಾರೆ.

# ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಮ್ಯಾಕ್ಸಿಲೋಫಿಷಿಯಲ್ ಶಸ್ತ್ರಚಿಕಿತ್ಸೆ ಲಭ್ಯ

## ವಿಜಯಪುರದಲ್ಲಿ ಶಾಸಕ ಹಾಗೂ ಜೆಎಸ್‌ಎಸ್ ಆಸ್ಪತ್ರೆಯ ಸಂಸ್ಥಾಪಕ ಬಸನಗೌಡ ಪಾಟೀಲ ಯತ್ನಾಳ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಮೆಟ್ರೋನಗರದಲ್ಲಿಒದಗಿಸಲಾಗಿರುವ ಆರೋಗ್ಯ ಸೇವೆಗಳನ್ನು ವಿಜಯಪುರದ ಜೆಎಸ್‌ಎಸ್ ಆಸ್ಪತ್ರೆಯಲ್ಲಿಯೇ ಒದಗಿಸಲಾಗುತ್ತಿದ್ದು, ಅದರ ಭಾಗವಾಗಿ ಅತ್ಯಾಧುನಿಕ ನವಜಾತ ಶಿಶುಗಳ ತೀವ್ರ ನಿಗಾ ಘಟಕ, ದಂತಗಳ ಆರೋಗ್ಯಕ್ಕೆ ಸಂಬಂಧಿಸಿದ ಮ್ಯಾಕ್ಸಿಲೋಫಿಷಿಯಲ್ ಶಸ್ತ್ರಚಿಕಿತ್ಸೆ ಸಹ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಹಾಗೂ ಜೆಎಸ್‌ಎಸ್ ಆಸ್ಪತ್ರೆಯ ಸಂಸ್ಥಾಪಕ ಬಸನಗೌಡ ಪಾಟೀಲ ಯತ್ನಾಳ ಪ್ರಕಟಿಸಿದರು.

ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಕೈಗೊಳ್ಳಲಾಗುತ್ತಿರುವ ಆರೋಗ್ಯ ಸೇವೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಿವರಣೆ ನೀಡಿದ ಅವರು, ವಿಜಯಪುರದಲ್ಲಿ ಎನ್‌ಐಸಿಯು ಘಟಕವನ್ನು ಆಧುನಿಕ ಸ್ಪರ್ಶದೊಂದಿಗೆ ಆರಂಭಿಸಲಾಗಿದ್ದು, ನವಜಾತ ಶಿಶುಗಳಿಗಳಿಗೆ ಸಕಲ ಆರೋಗ್ಯ ಸೌಲಭ್ಯಗಳು ದೊರಕಲಿವೆ, 24 ಗಂಟೆಗಳ ನಿಯೋನೇಟಾಲಜಿಸ್ಟ್, ಮಲ್ಟಿಪಾರಾ ಮಾನಿಟರ್, ಬಬಲ್ ಸಿಪಿಎಪಿ ಸೌಲಭ್ಯ ಸೇರಿದಂತೆ ವೈದ್ಯಕೀಯ ರಂಗದಲ್ಲಿ ಅದರಲ್ಲೂ ನವಜಾತ ಶಿಶುಗಳ ಆರೋಗ್ಯ ರಕ್ಷಣೆಯಲ್ಲಿ ಆಧುನಿಕ ಸ್ಪರ್ಶ ನೀಡಲಾಗಿದೆ ಎಂದರು.

### ಲಕ್ಷ್ಮೀಪುತ್ರಿ ಸುರಕ್ಷಾ ಯೋಜನೆ

ಸಾಮಾಜಿಕ ಸೇವೆಯನ್ನೂ ಸಹ ಗಮನದಲ್ಲಿರಿಸಿಕೊಂಡು ಅನೇಕ ರೀತಿಯ ಸೌಲಭ್ಯಗಳನ್ನು ಆಸ್ಪತ್ರೆಯಿಂದ ಒದಗಿಸಲಾಗುತ್ತಿದೆ, ಶ್ರೀ ಸಿದ್ದೇಶ್ವರ ಲೋಕ ಕಲ್ಯಾಣ ಟ್ರಸ್ಟ್ ಸಹಯೋಗದಲ್ಲಿ ಲಕ್ಷ್ಮೀಪುತ್ರಿ ಸುರಕ್ಷಾ ಯೊಜನೆಯನ್ನು ಆಸ್ಪತ್ರೆಯಲ್ಲಿ ಅನುಷ್ಠಾನಗೊಳಿಸಿದ್ದು, ಹೆಣ್ಣು ಮಗು ಜನಿಸಿದವರಿಗೆ ಉಚಿತ ಆಸ್ಪತ್ರೆ ಸೇವೆಗಳು, ಅಗತ್ಯ ಔಷಧಿಗಳು, ವಿವಿಧ ತಪಾಸಣೆಗಳನ್ನು ಉಚಿತವಾಗಿ ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಯತ್ನಾಳ ವಿವರಿಸಿದರು.

### ಖಾಸಗಿ ವೈದ್ಯಕೀಯ ಕಾಲೇಜ್‌ಗೆ ಆರಂಭ

ಶ್ರೀ ಸಿದ್ದೇಶ್ವರ ಸಂಸ್ಥೆಯಿಂದ ಖಾಸಗಿ ವೈದ್ಯಕೀಯ ಕಾಲೇಜ್ ಸ್ಥಾಪಿಸುವ ನಿಟ್ಟಿನಲ್ಲಿ ಅಗತ್ಯಕ್ರಮ ಕೈಗೊಳ್ಳಲಾಗುತ್ತಿದ್ದು, 2028 ರವೇಳೆಗೆ ಮೊದಲ ಬ್ಯಾಚ್ ಆರಂಭಿಸುವ ನಿಟ್ಟಿನಲ್ಲಿ ತಯಾರಿ ಭರದಿಂದ ಕೈಗೊಳ್ಳಲಾಗುತ್ತಿದೆ, ಖಾಸಗಿ ವೈದ್ಯಕೀಯ ಕಾಲೇಜ್‌ಗೆ ಬೇಕಾದ ಪೂರಕ ಸೌಲಭ್ಯ, ಆಸ್ಪತ್ರೆ ಎಲ್ಲವೂ ಲಭ್ಯವಿವೆ, ಹೆಚ್ಚುವರಿಯಾಗಿ ಎಲ್.ಎಚ್. ಬಿದರಿ ಅವರ ಆಸ್ಪತ್ರೆ ಸಹ ನಮಗೆ ಪೂರಕ ಸೇವೆ ಒದಗಿಸುವ ನಿಟ್ಟಿನಲ್ಲಿ ಒಡಂಬಡಿಕೆ ಮಾಡಿಕೊಂಡಿದೆ, ಹೀಗಾಗಿ ಶೀಘ್ರದಲ್ಲಿ ವೈದ್ಯಕೀಯ ಕಾಲೇಜ್ ಆರಂಭಿಸಲಾಗುವುದು ಎಂದು ಯತ್ನಾಳ ಪ್ರಕಟಿಸಿದರು.

ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸರ್ಕಾರ ಮಾಡುವುದಿಲ್ಲ. ಪಿಪಿಪಿ ಮಾದರಿಯಿಂದ ನಮಗೆ ಲಾಭ ಇಲ್ಲ. ಆದ–'ರೂ, ಉದ್ದೇಶಪೂರ್ವಕವಾಗಿ ಅಪಪ್ರಚಾರ ಮಾಡಲಾಯಿತು. ನಮ್ಮದೇ ಸ್ವಂತ ಕಾಲೇಜು ಮಾಡಿದರೆ, ನಮಗೆ ಹೆಚ್ಚು ಅನುಕೂಲವಾಗಲಿದೆ, ಪಿಪಿಪಿ ಮಾದರಿಯಾದರೆ ಸರ್ಕಾರ ಹೇಳಿದಂತೆ ನಾವು ಕೇಳಬೇಕಾಗುತ್ತದೆ. ಹೀಗಾಗಿ 2028ಕ್ಕೆ ಮೊದಲ ಬ್ಯಾಚ್ ಆರಂಭಿಸಲು ಉದ್ದೇಶಿಸಲಾಗಿದೆ. ಪ್ರಸ್ತುತ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭಿಸಲಾಗುವುದು. 500 ಕೋಟಿ ರೂ. ವೆಚ್ಚದಲ್ಲಿ ಎಲ್ಲ ಸೌಲಭ್ಯಗಳನ್ನು ಮಾಡಿಕೊಳ್ಳಲಾಗುತ್ತದೆ ಎಂದರು.

ದಂತಗಳ ಆರೋಗ್ಯ ಸೇವೆ ಒದಗಿಸುವಲ್ಲಿಯೂ ಜೆಎಸ್‌ಎಸ್ ಮುನ್ನಡೆ ಇರಿಸಿದೆ, ಅತ್ಯಾಧುನಿಕ ದಂತ ಹಾಗೂ ಮ್ಯಾಕ್ಸಿಫಿಫೇಷಿಯಲ್ ಶಸ್ತ್ರಚಿಕಿತ್ಸೆ ಸಹ ಇಲ್ಲಿ ಆರಂಭಿಸಲಾಗಿದೆ, ದೊಡ್ಡ ಮಹಾನಗರಗಳಲ್ಲಿ ಲಭ್ಯವಿದ್ದ ಈ ಚಿಕಿತ್ಸೆ ಈಗ ವಿಜಯಪುರದಲ್ಲಿಯೇ ಲಭ್ಯವಿದೆ ಎಂದರು.

24*7 ಟ್ರಾಮಾ ಸೆಂಟರ್ ಸಹ ಕಾರ್ಯನಿರ್ವಹಿಸುತ್ತಿದ್ದು, ರಾಷ್ಟ್ರೀಯ ಹೆದ್ದಾರಿಗಳ ಅಫಘಾತ ಪೀಡಿತರಿಗೆ ಪಿ.ಎಂ. ರಾಹತ್ ಯೋಜನೆಯಡಿಯಲ್ಲಿ ಅರ್ಹರಿಗೆ ಉಚಿತ ಚಿಕಿತ್ಸೆ ಸಹ ಒದಗಿಸಲಾಗುತ್ತಿದೆ ಎಂದು ಶಾಸಕರು ವಿವರಿಸಿದರು.

# ದೇವರಹಿಪ್ಪರಗಿ: ರಸ್ತೆ ಬದಿಗೆ ಉರುಳಿದ ಸಾರಿಗೆ ಬಸ್, 16 ಜನ ಪ್ರಯಾಣಿಕರಿಗೆ ಗಾಯ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಚಾಲಕನ ನಿಯಂತ್ರಣ ತಪ್ಪಿದ ಸಾರಿಗೆ ಬಸ್ ರಸ್ತೆ ಬದಿಗೆ ಉರುಳಿದ ಪರಿಣಾಮ 16 ಜನ ಪ್ರಯಾಣಿಕರು ಗಾಯಗೊಂಡ ಘಟನೆ ಪಟ್ಟಣದ ಮುಳವಾಡ ಕಾಲುವೆ ಬಳಿಯ ತಿರುವಿನಲ್ಲಿ ಸಂಭವಿಸಿದೆ.

ಪಟ್ಟಣದ ಬಸವನ ಬಾಗೇವಾಡಿ ರಸ್ತೆಯಲ್ಲಿನ ಮುಳವಾಡ ಏತ ನೀರಾವರಿ ಕಾಲುವೆಯ ಬಳಿ ತಿರುವಿನಲ್ಲಿ ಸೋಮವಾರ ಬಸವನಬಾಗೇವಾಡಿಯಿಂದ ದೇವರಹಿಪ್ಪರಗಿಗೆ ಬರುತ್ತಿದ್ದ ಬಸವನ ಬಾಗೇವಾಡಿ ಘಟಕಕ್ಕೆ ಸೇರಿದ ಸಾರಿಗೆ ಬಸ್(ಕೆ.ಎ.28 ಎಫ್ 1958) ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಉರುಳಿದ ಪರಿಣಾಮ 16 ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ. ಗಾಯಗೊಂಡವರಿಗೆ ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗಿದೆ. ಹೆಚ್ಚು ಗಾಯಗೊಂಡ ನಾಲ್ವರನ್ನು ಹೆಚ್ಚಿನ ಚಿಕಿತ್ಸೆಗೆ ಸಿಂದಗಿ ಹಾಗೂ ವಿಜಯಪುರ ಸರ್ಕಾರಿ ಆಸ್ಪತ್ರೆಗೆ ಕಳಿಸಲಾಗಿದೆ.

ಅಪಘಾತದ ಸ್ಥಳಕ್ಕೆ ದೇವರಹಿಪ್ಪರಗಿ ಪೊಲೀಸ್‌ರು ಭೇಟಿ ನೀಡಿ, ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಮಾರುತೇಶ್ವರ ಜಾತ್ರೆ: ಸಂಭ್ರಮದ ಹಾಲೋಕುಳಿಗೆ ಅದ್ದೂರಿ ತೆರೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಜಮಖಂಡಿ: ಅಲ್ಲಿ ಸಾವಿರಾರು ಜನರು ಜಮಾಯಿಸಿದ್ದರು. ಕೆಲವರು 52 ಅಡಿ ಎತ್ತರ ಕಂಬವನ್ನು ಏರಲು ಸಿದ್ಧರಾಗಿ ನಿಂತಿದ್ದರು. ಮೈನವಿರೇಳಿಸುವ ಈ ಸಾಹಸದಲ್ಲಿ ಕೆಲವರು ಕಂಬ ಏರಲು ಹೋಗಿ ಬೀಳುತ್ತಿದ್ದರೆ, ಮತ್ತೆ ಕೆಲವರು ಎದ್ದು ಗುರಿ ಮುಟ್ಟಲು ಹರಸಾಹಸ ನಡೆಸುತ್ತಿದ್ದರು. ಕೊನೆಗೆ ಒಬ್ಬ ಗುರಿತಲುಪುತಿದ್ದಂತೆ ಚಪ್ಪಾಳೆ ಸಿಳ್ಳೆ ಕೇಕೆಗಳ ಸುರಿಮಳೆಯಾಯಿತು.

ಇದು ಗ್ರಾಮ ಆರಾಧ್ಯ ದೈವ ಮಾರುತೇಶ್ವರ ಜಾತ್ರೆ ನಿಮಿತ್ತ ಸೋಮವಾರ ನಡೆದ ಹಾಲೋಕುಳಿಯ ಝಲಕ್, ಜಾತ್ರೆ ನಿಮಿತ್ತ ಮೂರು ದಿನ ನಡೆದ ವಿವಿಧ ಕಾರ್ಯಕ್ರಮಗಳಲ್ಲಿ ಹಾಲೋಕುಳಿ ವಿಶೇಷವಾಗಿ ಗಮನ ಸೆಳೆಯಿತು.

ಏನಿದು ವಿಶೇಷ: ದೇವಸ್ಥಾನ ಎದುರು 52 ಅಡಿ ಎತ್ತರದ ಕಂಬವನ್ನು ನೆಟ್ಟು ಅದರ ಮೇಲೆ ವ್ಯಕ್ತಿಯನ್ನು ಕೂಡಿಸಲಾಗಿತ್ತು. ಈ ಕಂಬಕ್ಕೆ ಜಾರುವ ಪದಾರ್ಥ ಲೇಪಿಸಲಾಗಿತ್ತು. ಸ್ಪರ್ಧೆಗೆ ಬಂದ ಯುವಕರು ಈ ಕಂಬ ಹತ್ತಿ ಮೇಲೆ ಕುಳಿತ ವ್ಯಕ್ತಿಯನ್ನು ಕೆಳಗೆ ಇಳಿಸಬೇಕು.

ಒಬ್ಬೊಬ್ಬರಾಗಿ ಮೇಲೆ ಏರಲು ಯತ್ನಿಸುತ್ತಿದ್ದಂತೆ ಸುತ್ತ ನೆರೆದವರು ನೀರು ಎರಚಿ ಅವರನ್ನು ಕೆಳಗಿಳಿಸಲು ಯತ್ನಿಸುತ್ತಿದ್ದರು. ಜಾರುತ್ತಿದ್ದ ಕಂಬದಿಂದ ಬಿದ್ದವರೇ ಹೆಚ್ಚು. ಕೊನೆಗೊಬ್ಬ ಎಲ್ಲ ಅಡೆತಡೆಗಳನ್ನು ಮೆಟ್ಟಿ ಮೇಲೆ ಹತ್ತಿದ. ಮೇಲೆ ಕುಳಿತ ವ್ಯಕ್ತಿಯನ್ನು ಕರೆದುಕೊಂಡು ಬಂದು ಕೆಳಗಿದ್ದ ಕೆಸರನ್ನು ಅವನಿಗೆ ಮೆತ್ತಿದ. ಆಗ ಚಪ್ಪಾಳೆಗಳ ಸುರಿಮಳೆಯೊಂದಿಗೆ ಹಾಲೋಕುಳಿಗೆ ಅದ್ದೂರಿ ತೆರೆ ಎಳೆಯಲಾಯಿತು.

ಯುವಕ ಈಶ್ವರ ಸದಾಶಿವ ಕಲ್ಯಾಣಿ ಈ ಸಾಹಸ ಮೆರೆದು ಎಲ್ಲರ ಮೆಚ್ಚುಗೆಗೆ ಪಾತ್ರನಾದನು.

### ವಿಶೇಷ ಅಭಿಷೇಕ, ಮೆರವಣಿಗೆ

ಹಾಲೋಕುಳಿ ಮುನ್ನಾದಿನ ಭಾನುವಾರ ನೀರೋಕುಳಿ ಆಚ–'ರಣೆ ನಡೆಯಿತು. ಅದರ ಜತೆಗೆ ಶನಿವಾರ ಕೃಷ್ಣಾ ನದಿ ದಡದಲ್ಲಿ ಮಾರುತೇಶ್ವರನಿಗೆ ಅಭಿಷೇಕ, ವಾದ್ಯ ವೈಭವಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ, ಕೊಲ್ಲೂರು ಮುಕಾಂಬಿಕಾ ತ್ಯಗಾತೆ ರಸಮಂಜರಿ ಕಾರ್ಯಕ್ರಮಗಳು▯ ವಿಶೇಷ ಪೂಜೆ ನೆರವೇರಿದವು. ರವಿವಾರ ವಿವಿಧ ಕಾರ್ಯಕ್ರಳ ಜೋತೆ ಜೆವರ್ಗಿ ರಾಜಣ್ಣ ಅವರ ತಂಡದವರಿಂದ ಮುತ್ತಿನಂತ ಅತ್ತಿಗೆ ಎಂಬ ಸುಂದರ ಸಾಮಾಜಿಕ ನಾಟಕ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜರುಗಿದವು.

### ಜಂಗಿ ಕುಸ್ತಿಗೆ ಮನಸೋತ ಪ್ರೇಕ್ಷಕರು

ಸೋಮವಾರ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆ ಆವರಣದಲ್ಲಿ ನಡೆದ ರಾಷ್ಟ್ರ ಮಟ್ಟದ ಜಂಗಿ ನಿಕಾಲಿ ಕುಸ್ತಿ ಗಮನ ಸೆಳೆಯಿತು. ಕುಸ್ತಿ ಪಂದ್ಯಾವಳಿ ಪ್ರೇಕ್ಷಕರನ್ನು ರೋಮಾಂಚನಗೊಳಿಸಿತು.

ಮಹಾರಾಷ್ಟ್ರದ ಸೊಲ್ಲಾಪುರ, ಕೊಲ್ಲಾಪುರ, ಪುಣೆ, ಸಾಂಗಲಿ, ಜತ್ತ, ರಾಜ್ಯದ ಧಾರವಾಡ, ವಿಜಯಪುರ, ಕುಂಬಾರಹಳ್ಳ, ಆಲಗೂರ, ಚಿಕ್ಕಪಡಸಲಗಿ ಸೇರಿದಂತೆ ವಿವಿಧ ಭಾಗಗಳಿಂದ ಕುಸ್ತಿ ಪಟುಗಳು ಆಗಮಿಸಿದ್ದರು. ಸೆಡ್ಡು ಹೊಡೆಯುತ್ತಲೇ ಕುಸ್ತಿ ಮೈದಾನಕ್ಕೆ ಅವರು ಇಳಿಯುತ್ತಿದ್ದಂತೆ ಸಾವಿರಾರು ಜನರ ಸಂಭ್ರಮ ಇಮ್ಮಡಿಗೊಂಡಿತು. ಮೈದಾನದಲ್ಲಿ ಕುಸ್ತಿ ಪಟುಗಳ ಸೆಣಸಾಟ ಕ್ಷಣ ಕ್ಷಣಕ್ಕೂ ರೋಮಾಂಚನಗೊಳಿಸಿ ಪ್ರೇಕ್ಷಕರನ್ನು ತುದಿಗಾಲ ಮೇಲೆ ನಿಲ್ಲುವಂತೆ ಮಾಡಿತು. ಜೈ ಹನುಮಾನ ಯುವ ಮಿತ್ರ ಮಂಡಳಿಯವರು ನೇತೃತ್ವ ವಹಿಸಿದ್ದರು.

"ನಮ್ಮೂರಿನ ಮಾರುತೇಶ್ವರ ಭಕ್ತರ ಇಷ್ಟಾರ್ಥ ಪೂರೈಸುವ ಭಾಗ್ಯವಂತನಾಗಿದ್ದಾನೆ. ಹನುಮದೇವರಿಗೆ ಹರಕೆ ಹೊತ್ತರೆ ಎಲ್ಲವು ಈಡೇರಿಸುತ್ತಾನೆ. ಆದ್ದರಿಂದ ವರ್ಷದಿಂದ ವರ್ಷಕ್ಕೆ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ."

■ ಪರಮಗೊಂಡ ಬಾ ದಾನಗೌಡ
ಜೈ ಹನುಮಾನ ಕಮೀಟಿಯ ಅಧ್ಯಕ್ಷರು, ಗ್ರಾಮದ ಹಿರಿಯರು

" ಕುಸ್ತಿ ಕ್ರೀಡೆಯು ಒಲಿಂಪಿಕ್ ನಲ್ಲಿ ಪದಕದ ಭರವಸೆಯ ಕ್ರೀಡೆಯಾಗಿದೆ. ಭಾರತೀಯ ಕ್ರೀಡೆಗಳಲ್ಲಿ ಸಂಸ್ಕಾರವನ್ನು ಕಲಿಸುವ, ರಾಜ ಮಹಾರಾಜರು ಬೆಳೆಸಿರುವಂತಹ ಈ ಕ್ರೀಡೆಯನ್ನು ಪಾಲನೆ, ಪೋಷಣೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ."

■ ಮಲ್ಲು ಪಟ್ಟಣಶೆಟ್ಟಿ
ನಿವೃತ್ತ ಶಿಕ್ಷಕರು ಹಾಗೂ ಕುಸ್ತಿ ಕಾರ್ಯಕ್ರಮ ನಿರೂಪಕರು



# ವಿದ್ಯಾರ್ಥಿಗಳೇ, ಪರೀಕ್ಷೆ ಫಲಿತಾಂಶ ಜೀವನದ ಫಲಿತಾಂಶವಲ್ಲ

■ ಉದಯರಶ್ಮಿ ದಿನಪತ್ರಿಕೆ

ಭಾವರಶ್ಮಿ

ಈಗಾಗಲೇ ವಿದ್ಯಾರ್ಥಿಗಳು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾತುರದಿಂದ ಕಾಯುತ್ತಿದ್ದಾರೆ. ಮೊದಲು ದ್ವಿತೀಯ ಪಿಯುಸಿ ನಂತರ ಎಸ್ ಎಸ್ ಎಲ್ ಸಿ ಫಲಿತಾಂಶ ಪ್ರಕಟವಾಗುತ್ತದೆ. ಫಲಿತಾಂಶ ಎಂದಾಕ್ಷಣ ಬಹಳಷ್ಟು ವಿದ್ಯಾರ್ಥಿಗಳ ಎದೆಯಲಿ ಗುಡುಗು ಸಿಡಿಲಿನ ಮಿಂಚು, ಎದೆಯಲ್ಲಿ ಲಬ್ ಡಬ್ ಆರಂಭವಾಗಿರುತ್ತದೆ.



**ಪರೀಕ್ಷೆಗಳು ಒಂದು ಭಾಗ ಮಾತ್ರ**

ವಿದ್ಯಾರ್ಥಿಗಳೆ ನಮ್ಮ ಜೀವನದಲಿ ನೂರಾರು ಪರೀಕ್ಷೆಗಳು ಎದುರಾಗುತ್ತವೆ ಅದರಲ್ಲಿ ವಿದ್ಯಾರ್ಥಿ ಜೀವನದ ಪರೀಕ್ಷೆಗಳು ಒಂದು ಭಾಗ ಮಾತ್ರ. ಪರೀಕ್ಷೆ ಎಂಬುದು ನಮ್ಮೊಳಗಿನ ವಿಷಯದ ಜ್ಞಾನದ ಮಟ್ಟವನ್ನು ಪರೀಕ್ಷಿಸುವ ಸಾಧನ. ಪರೀಕ್ಷೆ ಎಂದರೆ ಬಹುತೇಕ ವಿದ್ಯಾರ್ಥಿಗಳಿಗೆ ಭಯ, ಒತ್ತಡ, ಆತಂಕವನ್ನುಂಟುಮಾಡುವ ಒಂದು ಪದ. ಆದರೆ ನಿಜವಾದ ಅರ್ಥದಲ್ಲಿ ಪರೀಕ್ಷೆ ಎಂದರೆ ಕೇವಲ ಅಂಕಗಳ ಅಳತೆಗೋಲು ಅಲ್ಲ; ಅದು ನಮ್ಮ ಜ್ಞಾನ, ಶ್ರಮ, ಶಿಸ್ತಿನ ಪ್ರತಿಬಿಂಬವಾಗಿದೆ.

**ಮರೀಕ್ಷೆ ಫಲಿತಾಂಶ ಜೀವನದ ಫಲಿತಾಂಶವಲ್ಲ**

ಇಂದಿನ ಸಮಾಜದಲ್ಲಿ ಪರೀಕ್ಷೆಯ ಫಲಿತಾಂಶಕ್ಕೆ ಅತಿಯಾದ ಮಹತ್ವ ನೀಡಲಾಗುತ್ತಿದೆ. ಇದರ ಪರಿಣಾಮವಾಗಿ ವಿದ್ಯಾರ್ಥಿಗಳು ತಮ್ಮ ಜೀವನದ ಮೌಲ್ಯವನ್ನೇ ಅಂಕಗಳ ಮೂಲಕ ಅಳೆಯಲು ಆರಂಭಿಸಿದ್ದಾರೆ. ಆದ್ದರಿಂದ "ಪರೀಕ್ಷೆ ಫಲಿತಾಂಶ ಜೀವನದ ಫಲಿತಾಂಶವಲ್ಲ" ಎಂಬ ಸತ್ಯವನ್ನು ಅರಿತುಕೊಳ್ಳುವುದು ಅತ್ಯಂತ ಅಗತ್ಯವಾಗಿದೆ.

**ಸಂಪೂರ್ಣ ಸಾಮರ್ಥ್ಯ ಅಳೆವ ಸಾಧನವಲ್ಲ**

ವಿದ್ಯಾರ್ಥಿಗಳೇ ಪರೀಕ್ಷೆಗಳು ಸಂಪೂರ್ಣ ಸಾಮರ್ಥ್ಯವನ್ನು ಅಳೆಯುವ ಸಾಧನವಲ್ಲ. ಪರೀಕ್ಷೆಯಲ್ಲಿ ಕೆಲವರು ಹೆಚ್ಚು,ಕೆಲವರು ಕಡಿಮೆ ಅಂಕಗಳನ್ನು ಪಡೆಯುತ್ತಾರೆ.ಇಲ್ಲಿ ಯಾರು ದಡ್ಡರೂ ಅಲ್ಲ ಜಾಣರು ಅಲ್ಲ ವಿಷಯವನ್ನು ಅರ್ಥೈಸಿಕೊಳ್ಳುವಿಕೆ, ವ್ಯಕ್ತಪಡಿಸುವಿಕೆಯು ಬಹಳ ಮುಖ್ಯವಾದುದ್ದು.ಒಂದು ದಿನ ಅಥವಾ ಕೆಲವು ಗಂಟೆಗಳ ಅವಧಿಯಲ್ಲಿ ಬರೆದ ಉತ್ತರಪತ್ರಿಕೆ ವಿದ್ಯಾರ್ಥಿಯ ಜ್ಞಾನ, ಪ್ರತಿಭೆ, ಸೃಜನಶೀಲತೆ, ವ್ಯಕ್ತಿತ್ವ ಇವುಗಳನ್ನು ಸಂಪೂರ್ಣವಾಗಿ ತೋರಿಸಲು ಸಾಧ್ಯವಿಲ್ಲ. ಕೆಲವರು ಓದಿನಲ್ಲಿ ಸಾಮಾನ್ಯರಾಗಿದ್ದರೂ, ಕಲೆ, ಕ್ರೀಡೆ, ಸಂಗೀತ, ಸಂವಹನ ಕೌಶಲ್ಯಗಳಲ್ಲಿ ಅಪಾರ ಪ್ರತಿಭೆ ಹೊಂದಿರುತ್ತಾರೆ. ಅಂಥವರನ್ನು ಕೇವಲ ಅಂಕಗಳ ಆಧಾರದ ಮೇಲೆ ತೀರ್ಮಾನಿಸುವುದು ತಪ್ಪಾಗಿದೆ.

**ಜೀವನದ ಪರೀಕ್ಷೆ ಸವಾಲಾಗಿ ಸ್ವೀಕರಿಸಿದ ತೆಂಡೂಲ್ಕರ್**

ಉದಾಹರಣೆ: ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ ಅಂಕಗಳ ಪರೀಕ್ಷೆಯಲ್ಲಿ ವಿಫಲವಾದರು. ಆದರೆ ಅವರೊಳಗೆ ಅಡಗಿದ ಕ್ರಿಕೆಟ್ ನ ಪ್ರತಿಭೆಯ ಮೂಲಕ ಜೀವನದ ಪರೀಕ್ಷೆಯನ್ನು ಸವಾಲಾಗಿ ಸ್ವೀಕರಿಸಿ ಇಡೀ ಕ್ರಿಕೆಟ್ ಲೋಕದಲ್ಲೇ ಹೆಸರು ಗಳಿಸಿದರು. ಇಂದಿಗೂ ಎಂದೆಂದಿಗೂ ಸಚಿನ್ ತೆಂಡೂಲ್ಕರ್ ಹೆಸರು ಅಜರಾಮರ. ಅಂಕಗಳ ಪರೀಕ್ಷೆಗಿಂತ ಜೀವನದ ಪರೀಕ್ಷೆ ಬಹುಮುಖ್ಯ ಎಂಬುದನು ಅರಿಯಲು ಈ ಮಹಾನ್ ಸಾಧಕನ ಉದಾಹರಣೆ ವಿದ್ಯಾರ್ಥಿಗಳಿಗೆ ಸಾಕು.



**ಅತಿಯಾದ ಒತ್ತಡದಿಂದ ಮನಸ್ಸಿನ ಮೇಲೆ ದುಷ್ಪರಿಣಾಮ**

ಪರೀಕ್ಷಾ ಫಲಿತಾಂಶದ ಬಗ್ಗೆ ಅತಿಯಾದ ಒತ್ತಡವು ವಿದ್ಯಾರ್ಥಿಗಳ ಮನಸ್ಸಿನ ಮೇಲೆ ಅಗಾಧ ದುಷ್ಪರಿಣಾಮ ಬೀರುತ್ತದೆ. ಆತಂಕ, ಭಯ, ಕೀಳರಿಮೆ ಹೀನ ಮನೋಭಾವ ಇವುಗಳಿಗೆ ಕಾರಣವಾಗುತ್ತದೆ. ಕೆಲವು ಸಂದರ್ಭಗಳಲ್ಲಿ ವಿದ್ಯಾರ್ಥಿಗಳು ತೀವ್ರ ನಿರಾಶೆಗೆ ಒಳಗಾಗಿ ತಪ್ಪು ನಿರ್ಧಾರಗಳನ್ನೂ ತೆಗೆದುಕೊಳ್ಳುತ್ತಾರೆ. ಆದ್ದರಿಂದ ಪಾಲಕರು ಮತ್ತು ಶಿಕ್ಷಕರು ಮಕ್ಕಳಿಗೆ ಪ್ರೋತ್ಸಾಹ ನೀಡಿ, ಫಲಿತಾಂಶಕ್ಕಿಂತ ಅವರ ಪ್ರಯತ್ನವನ್ನು ಮೆಚ್ಚಬೇಕು.

**ಆತ್ಮವಿಶ್ವಾಸದಿಂದ ಕನಸುಗಳ ಕಡೆಗೆ ಸಾಗಿ**

ಪರೀಕ್ಷೆ ಫಲಿತಾಂಶವು ಜೀವನದ ಒಂದು ಸಣ್ಣ ಭಾಗ ಮಾತ್ರ. ಅದು ವ್ಯಕ್ತಿಯ ಸಂಪೂರ್ಣ ಜೀವನ ನಿರ್ಧರಿಸುವುದಿಲ್ಲ.

ಶಿಕ್ಷಣದ ಉದ್ದೇಶ ಕೇವಲ ಅಂಕ ಗಳಿಸುವುದಲ್ಲ; ಒಳ್ಳೆಯ ವ್ಯಕ್ತಿತ್ವವನ್ನು ನಿರ್ಮಿಸುವುದಾಗಿದೆ. ನೈತಿಕ ಮೌಲ್ಯಗಳು, ಸಾಮಾಜಿಕ ಹೊಣೆಗಾರಿಕೆ, ಜೀವನ ಕೌಶಲ್ಯಗಳು ಇವುಗಳೇ ವ್ಯಕ್ತಿಯನ್ನು ಯಶಸ್ವಿಯಾಗಿಸುತ್ತವೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಅರಿತು, ಆತ್ಮವಿಶ್ವಾಸದಿಂದ ತಮ್ಮ ಕನಸುಗಳ ಕಡೆಗೆ ಸಾಗಬೇಕು.

**ತಪ್ಪುಗಳಿಂದ ಕಲಿತು ಮುಂದಕ್ಕೆ ಸಾಗಿ**

ವಿದ್ಯಾರ್ಥಿಗಳು ತಮ್ಮ ವೈಫಲ್ಯವನ್ನು ಸೋಲಾಗಿ ಕಾಣದೆ, ಅದನ್ನು ಪಾಠವಾಗಿ ಪರಿಗಣಿಸಬೇಕು. ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದರೆ ಅದು ಜೀವನದ ಅಂತ್ಯವಲ್ಲ. ಅದು ಮುಂದಿನ ಯಶಸ್ಸಿಗೆ ಒಂದು ಹೆಜ್ಜೆಯಾಗಬಹುದು. ತಪ್ಪುಗಳಿಂದ ಕಲಿತು ಮುಂದಕ್ಕೆ ಸಾಗುವುದು ಜೀವನದ ನಿಜವಾದ ಪಾಠವಾಗಿದೆ.



ಜೀವನದಲ್ಲಿ ಯಶಸ್ಸು ಪಡೆಯಲು ಕೇವಲ ಪರೀಕ್ಷಾ ಫಲಿತಾಂಶವೇ ನಿರ್ಣಾಯಕವಲ್ಲ. ಪರಿಶ್ರಮ, ದೃಢಸಂಕಲ್ಪ, ಆತ್ಮವಿಶ್ವಾಸ ಮತ್ತು ನಿರಂತರ ಕಲಿಕೆಯ



ಮನೋಭಾವವೇ ಯಶಸ್ಸಿನ ನಿಜವಾದ ಕೀಲಿಕೈಗಳು. ಇತಿಹಾಸದಲ್ಲೂ ಮತ್ತು ಇಂದಿನ ಸಮಾಜದಲ್ಲೂ ಹಲವು ಮಹಾನ್ ವ್ಯಕ್ತಿಗಳು ಪರೀಕ್ಷೆಯಲ್ಲಿ ದೊಡ್ಡ ಸಾಧನೆ ಮಾಡದಿದ್ದರೂ ಜೀವನದಲ್ಲಿ ಮಹತ್ತರ ಸಾಧನೆ ಮಾಡಿದ್ದಾರೆ. ಇದರಿಂದ ಪರೀಕ್ಷೆಯು ಜೀವನದ ಒಂದು ಭಾಗವೇ ಹೊರತು ಜೀವನದ ಅಂತ್ಯವಲ್ಲ ಎಂಬುದು ಸ್ಪಷ್ಟವಾಗುತ್ತದೆ.

**ಕೊನೆ ಹನಿ**

ವಿದ್ಯಾರ್ಥಿಗಳೆ ಪರೀಕ್ಷೆಯ ಫಲಿತಾಂಶದಿಂದ ನಿರಾಶರಾಗಬೇಡಿ. ಅದು ನಿಮ್ಮ ಜೀವನದ ಒಂದು ಭಾಗ ಮಾತ್ರ, ಅಂತಿಮ ಗುರಿ ಅಲ್ಲ. ನಿಮ್ಮ ಕನಸುಗಳನ್ನು ನಂಬಿ, ನಿಮ್ಮ ಮೇಲೆ ವಿಶ್ವಾಸ ಇಡಿ, ಮುಂದುವರಿಯಿರಿ.ನಿಮ್ಮ ಜೀವನದ ಫಲಿತಾಂಶ ನಿಮ್ಮ ಕೈಯಲ್ಲಿದೆ, ಪರೀಕ್ಷೆಯ ಫಲಿತಾಂಶದಲ್ಲಲ್ಲ.

ಲೇಖಕ
ಅವಿನಾಶ ಸೆರೆಮನಿ
ಬೈಲಹೊಂಗಲ



# ಜಮಖಂಡಿ ವಿದ್ಯಾರ್ಥಿನಿಯರ ಸಾಧನೆಗೆ ಬಂಗಾರದ ಹೊಳಪು

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ:: 2024-25ನೇ ಸಾಲಿನ ಕನ್ನಡಸ್ನಾತಕೋತ್ತರವಿಭಾಗದಲ್ಲಿಜಮಖಂಡಿಯ ವಿದ್ಯಾರ್ಥಿನಿಯರು ಅತ್ಯುತ್ತಮ ಸಾಧನೆ ಮಾಡಿ ಮಹಾವಿದ್ಯಾಲಯದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಿಂದ ಎಂ.ಎ. ಕನ್ನಡ ಸ್ನಾತಕೋತ್ತರ ವಿಭಾಗದಲ್ಲಿ ರೇಖಾ ದೊಡವಾಡ ಅವರು ಪ್ರಥಮ ಯಾರ್ಂಕ್



ರೇಖಾ ದೊಡವಾಡ



ಸವಿತಾ ಗುಡ್ಲಮನಿ



ಆರತಿ ತಳವಾರ



ಶೃತಿ ನಾವಿ

ಪಡೆದು ನಾಲ್ಕು ಬಂಗಾರದ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. 'ಭಾರತೀಯ ಕಾವ್ಯಮೀಮಾಂಸೆ' ವಿಷಯದಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಆರತಿ ತಳವಾರ ಅವರು ಬಂಗಾರದ ಪದಕಕ್ಕೆ ಪಾತ್ರರಾಗಿದ್ದಾರೆ.

ಇನ್ನೂ ಸವಿತಾ ಗುಡ್ಲಮನಿ ನಾಲ್ಕನೇ ಯಾರ್ಂಕ್ ಹಾಗೂ ಶೃತಿ ನಾವಿ ಐದನೇ ಯಾರ್ಂಕ್ ಪಡೆದು ಮಹಾವಿದ್ಯಾಲಯದ ಪ್ರತಿಷ್ಠೆಯನ್ನು ಹೆಚ್ಚಿಸಿದ್ದಾರೆ.

ಈ ಸಾಧನೆಗೆ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಸುನಂದಾ ಎಸ್. ಶಿರೂರ, ಸಂಯೋಜಕರಾದ ಡಾ. ವೈ.ವೈ. ಕೊಕ್ಕನವರ, ಡಾ. ವಿ.ಆರ್. ದಳವಾಯಿ, ಡಾ. ಎಂ.ಎಂ. ಮಂಟೂರ ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗವು ವಿದ್ಯಾರ್ಥಿನಿಯರಿಗೆ ಅಭಿನಂದನೆಗಳನ್ನು ತಿಳಿಸಿ ಶುಭಾಶಯ ಕೋರಿದ್ದಾರೆ.

# ಚಿಕ್ಕಪಡಸಲಗಿಯಲ್ಲಿ ಮಾರುತಿ ದೇವರ ನೀರಓಕುಳಿ ಸಂಪನ್ನ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದಲ್ಲಿ ಮಾರುತಿ ದೇವರ ನೀರಓಕುಳಿ ಉತ್ಸವವು ರವಿವಾರ ಅತ್ಯಂತ ಭಕ್ತಿಭಾವ ಹಾಗೂ ವಿಜೃಂಭಣೆಯಿಂದ ಜರುಗಿತು. ಬೆಳಿಗ್ಗೆಯಿಂದಲೇ ಗ್ರಾಮದ ಭಕ್ತರು ದೇವಸ್ಥಾನಕ್ಕೆ ಹರಿದುಬಂದು ವಿಶೇಷ ಪೂಜೆಗಳು, ಅಭಿಷೇಕ ಹಾಗೂ ಅಲಂಕಾರ ಸೇವೆಗಳಲ್ಲಿ ಭಾಗವಹಿಸಿದರು. ಮುಂಚೆಯ ದಿನ ಶನಿವಾರ ದೇವರ ಮೂರ್ತಿಗೆ ಗ್ರಾಮದೆಲ್ಲೆಡೆ ಭವ್ಯ ಮೆರವಣಿಗೆ ನಡೆಸಲಾಗಿದ್ದು, ಭಜನೆ, ಡೊಳ್ಳು-ತಾಸೆ ಹಾಗೂ ನೃತ್ಯಗಳೊಂದಿಗೆ ಉತ್ಸವಕ್ಕೆ ಮತ್ತಷ್ಟು ಕಳೆ ತಂದಿತು.

ನೀರಓಕುಳಿ ಸಂಪ್ರದಾಯದಂತೆ ಪರಸ್ಪರ ನೀರು ಎರಚಿಕೊಂಡು ಸಂತೋಷ ವ್ಯಕ್ತಪಡಿಸಿದರು. ಈ ಸಂದರ್ಭ ಯುವಕರು, ಮಹಿಳೆಯರು ಹಾಗೂ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದರು. ಗ್ರಾಮದ ಹಿರಿಯರು ಹಾಗೂ ಮುಖಂಡರು ಪಾಲ್ಗೊಂಡು ಕಾರ್ಯಕ್ರಮಗಳ ಯಶಸ್ಸಿಗೆ ಸಹಕರಿಸಿದರು. ಎಲ್ಲರೂ ಸಮಾರಂಭದಲ್ಲಿ ಶಾಂತಿ, ಸೌಹಾರ್ದತೆಯ ಸಂದೇಶ ಸಾರಲಾಗಿತ್ತು, ಗ್ರಾಮದ ಏಕತೆ ಮತ್ತಷ್ಟು ಬಲವತ್ತಾಗಿದೆ ಎಂದು ಅಭಿಪ್ರಾಯ ವ್ಯಕ್ತವಾಯಿತು.ಉತ್ಸವದ ಅಂಗವಾಗಿ ಅನ್ನಸಂತರ್ಪಣೆ ಕಾರ್ಯಕ್ರಮವೂ ಏರ್ಪಡಿಸಲಾಗಿದ್ದು, ನೂರಾರು ಭಕ್ತರು ಪ್ರಸಾದ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಪರಮಗೊಂಡ ದಾನಗೌಡ ಗುರಪಾದಯ್ಯ ಹಿರೇಮಠ ಚಂದಪ್ಪ



ಕಡಕೋಳ ಸಿದ್ದಪ್ಪ ಮುತ್ತೂರ ಬಸಪ್ಪ ನ್ಯಾಮಗೌಡ ವೆಂಕಪ್ಪ ಸಂತಿ ಶ್ರೀಶೈಲ್ ಕಂಕಣವಾಡಿ ಭರತೇಶ ಕಡಕೋಳ ಮಹಾದೇವ ಕಲ್ಯಾಣಿ ಸುರೇಶ ದಾನಗೌಡ ಹೊಳಬಸಪ್ಪ ದಾನಗೌಡ ಸೇರಿದಂತೆ ಅನೇಕರಿದ್ದರು.

# ಕೂಡಗಿ ಸರಕಾರಿ ಪ.ಪೂ ಕಾಲೇಜು ಅತ್ಯುತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ





ಕೊಲ್ಹಾರ: ಸರ್ಕಾರಿ ಪದವಿ ಪೂರ್ವ ಕಾಲೇಜುಗಳೆಂದರೆ ಮೂಗುಮುರಿಯುವವರೇ ಜಾಸ್ತಿ ಆದರೆ ನಿಜವಾದ ಗುಣಾತ್ಮಕ ಬದಲಾವಣೆಗಳು ಇರುವುದು ಸರಕಾರಿ ಕಾಲೇಜುಗಳಲ್ಲಿ ಎಂಬುದನ್ನ ಸರಕಾರಿ ಪದವಿ ಪೂರ್ವ ಕಾಲೇಜು, ಕೂಡಗಿಯ ವಿದ್ಯಾರ್ಥಿ ವಿದ್ಯಾರ್ಥಿನಿಯರು ತೋರಿಸಿಕೊಟ್ಟಿದ್ದಾರೆ 2025- 26 ನೇ ಸಾಲಿನ ಪಿಯುಸಿ ದ್ವಿತೀಯ ಫಲಿತಾಂಶ ಶೇಕಡ 95.52 ರಷ್ಟಾಗಿದ್ದು ಕಾಲೇಜಿನ ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಗ್ರಾಮದ ಗುರು ಹಿರಿಯರು ಶುಭ ಹಾರೈಸಿದ್ದಾರೆ.

ಇಡೀ ಕಾಲೇಜಿಗೆ ಲಕ್ಷ್ಮಿಹಂಗರಗಿ 566, ಭಾಗ್ಯಶ್ರೀ ಮೋಡೆ 549, ಶಿಲ್ಪಾ ಆಸಂಗಿ 546, ರಕ್ಷಿತಾ ಇಬ್ರಾಹಿಂಪುರ್ 545, ರೇಖಾ ಜಲದಿ 529, ಶೃತಿ ಹಂಗರಗಿ 513, ರಕ್ಷಿತಾ ತೋಳಮಟ್ಟಿ 513, ಶಿವನಗೌಡ ಪಾಟೀಲ್ 506 ಹಾಗೂ ಪ್ರೇರಣಾ ಹಿರೇಮಠ 499, ಮನೋಜ ಸಾಲಹಳ್ಳಿ 499 ಅಂಕಗಳನ್ನು ಪಡೆಯುವುದರ ಮೂಲಕ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ. 67 ವಿದ್ಯಾರ್ಥಿಗಳಲ್ಲಿ 65 ವಿದ್ಯಾರ್ಥಿಗಳು ಪಾಸಾಗೋದರ ಮೂಲಕ ಖುಷಿಪಟ್ಟಿದ್ದಾರೆ. 07 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ ಪಾಸಾಗಿದ್ದರೆ, 51 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 05 ವಿದ್ಯಾರ್ಥಿಗಳ ದ್ವಿತೀಯ ದರ್ಜೆಯಲ್ಲಿ ಪಾಸ್ ಆಗುವುದರ ಮೂಲಕ ಕಾಲೇಜಿನ, ಗ್ರಾಮದ ಕೀರ್ತಿಯನ್ನು ಜಿಲ್ಲಾಮಟ್ಟದಲ್ಲಿ ಅಷ್ಟೇ ಅಲ್ಲದೆ ರಾಜ್ಯಮಟ್ಟದಲ್ಲೂ ಕೂಡ ಬೆಳಗಿದ್ದಾರೆ.

ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಕಾಲೇಜಿನ ಪ್ರಾಚಾರ್ಯರು, ಸಿಬ್ಬಂದಿ ವರ್ಗ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ಗ್ರಾಮದ ಗುರು ಹಿರಿಯರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಕಾಲೇಜಿನ ಫಲಿತಾಂಶವನ್ನು ಕಂಡು ಕಾಲೇಜ್ ಅಭಿವೃದ್ಧಿ ಸಮಿತಿ ಅಧ್ಯಕ್ಷ ಹನುಮಂತ ಮಸೂತಿ ಮಾತನಾಡಿ ಕಾಲೇಜಿನ ಸಿಬ್ಬಂದಿ ವರ್ಗದವರ ಬಗ್ಗೆ ಹಾಗೂ ಪ್ರಾಚಾರ್ಯರ ಬಗ್ಗೆ ನಮಗೆ ತುಂಬಾ ಅಭಿಮಾನವಿದೆ ಹಾಗೂ ಕಾಲೇಜಿನ ಫಲಿತಾಂಶದಲ್ಲಿ ನಿಮ್ಮೆಲ್ಲರ ಪಾತ್ರ ಮೆಚ್ಚುವಂಥದ್ದು ಎಂದು ಹರುಷ ವ್ಯಕ್ತಪಡಿಸಿ ಅಭಿನಂದಿಸಿದರು.

# ಎಸ್.ಕೆ.ಬೆಳ್ಳುಬ್ಬಿ ಪ.ಪೂ ಪಿಯು ಕಾಲೇಜ್ ಶೇ.100 ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪಟ್ಟಣದ ವಿಶ್ವಭಾರತಿ ವಿದ್ಯಾವರ್ಧಕ ಸಂಸ್ಥೆಯ ಎಸ್.ಕೆ. ಬೆಳ್ಳುಬ್ಬಿ ವಿಜ್ಞಾನ ಪಿಯು ಕಾಲೇಜಿನಲ್ಲಿ ಈ ಸಾಲಿನ ಪಿಯುಸಿ ಪರೀಕ್ಷೆಯಲ್ಲಿ ನೂರಕ್ಕೆ ನೂರರಷ್ಟು ಫಲಿತಾಂಶ ದಾಖಲಾಗಿದೆ.

ವಿಜ್ಞಾನ ವಿಭಾಗದಲ್ಲಿ ಪ್ರತಿಭಾ ಡೆಂಗಿ ಅವರು ಶೇಕಡಾ 97 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಗಳಿಸಿದ್ದು, ದಾನಮ್ಮ ಹಿರೇಮಠ ಅವರು ಶೇಕಡಾ 96.25 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಸುಮಿತ್ರಾ ವಂದಾಲ ಅವರು ಶೇಕಡಾ 93.25 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಓದುತ್ತಿರುವ ಒಟ್ಟು 25







ವಿದ್ಯಾರ್ಥಿಗಳಲ್ಲಿ 13 ಮಂದಿ ಡಿಸ್ಟಿಂಕ್ಷನ್, 11 ಮಂದಿ ಪ್ರಥಮ ದರ್ಜೆ ಹಾಗೂ 1 ವಿದ್ಯಾರ್ಥಿ ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

ವಿದ್ಯಾರ್ಥಿಗಳ ಪರಿಶ್ರಮ ಮತ್ತು ಶಿಕ್ಷಕರ ಕರ್ತವ್ಯನಿಷ್ಠೆಗೆ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಸಂ. ಬೆಳ್ಳುಬ್ಬಿ ಹಾಗೂ ಆಡಳಿತ ಮಂಡಳಿಯವರು, ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ಸಂತೋಷ ವ್ಯಕ್ತಪಡಿಸಿದ್ದಾರೆ.

# ಏ.15 ರಿಂದ ವಿಜಯಪುರದಲ್ಲಿ ಚಿತ್ರಕಲಾ ಪ್ರದರ್ಶನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಕ್ಯಾನವಾಸ್ ಆರ್ಟ್ ಫೌಂಡೇಶನ್ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯದೊಂದಿಗೆ ವಿಶ್ವ ದೃಶ್ಯಕಲಾ ದಿನಾಚರಣೆಯ ಅಂಗವಾಗಿ ಕ್ಯಾನವಾಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಂಗ್ರಹದಲ್ಲಿರುವ ನಮ್ಮ ನಾಡಿನ ಹಿರಿಯ ಮತ್ತು ಯುವ ಕಲಾವಿದರ ರೇಖಾಚಿತ್ರ ಮತ್ತು ಚಿತ್ರಕಲಾ ಕಲಾಪ್ರದರ್ಶನವನ್ನು ಬುಧವಾರ ದಿನಾಂಕ : 15-04-2026 ಸಂಜೆ. 04:00 ಗಂಟೆಗೆ ಪ್ರವಾಸೋದ್ಯಮ ಇಲಾಖೆಯ "ಸರಕಾರಿ ಆರ್ಟ್ ಗ್ಯಾಲರಿಯಲ್ಲಿ ನಡೆಯಲಿದೆ ಪ್ರದರ್ಶನದ ಉದ್ಘಾಟನೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ ನೆರವೇರಿಸಲಿದ್ದಾರೆ ಅತಿಥಿಗಳಾಗಿ ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಅಶೋಕ ಯಡಳ್ಳಿ ಹಿರಿಯ ಕಲಾವಿದರಾದ ಪಿ. ಎಸ್. ಕಡೇಮನಿ, ಪ್ರವಾಸೋಧ್ಯಮ ಇಲಾಖೆಯ ಉಪನಿರ್ದೇಶಕರಾದ ಅರವಿಂದ ಹೂಗಾರ, ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಇಂದುಶೇಖರ ಮಣೂರ ಅವರು ಆಗಮಿಸಲಿದ್ದಾರೆ. ಬಹಳ ಅಪರೂಪದ ಮತ್ತು ಶ್ರೇಷ್ಠ ಕಲಾವಿದರುಗಳ ವಿಶೇಷ ಕಲಾಪ್ರದರ್ಶನ ಇದಾಗಲಿದೆ ಈ ಪ್ರದರ್ಶನದಲ್ಲಿ ನಮ್ಮ ನಾಡಿನ ಹೆಸರಾಂತ ಹಿರಿಯ ಕಲಾವಿದರುಗಳಾದ ಸೋಮಶೇಖರ ಸಾಲಿ, ಎಸ್.ಎಸ್. ಮುನ್ನೊಳ್ಳಿ, ಎಂ. ಬಿ. ಪಾಟೀಲ್, ಆರ್. ಎಂ. ಹಡಪದ, ವಿಜಯ ಸಿಂಧೂರ, ಪ್ರೊ. ಎಂ. ಜೆ. ಕಮಲಾಕ್ಷಿ, ವಿ. ಬಿ.ಹಿರೇಗೌಡರ್, ಎಂ. ಎಸ್. ಚಂದ್ರಶೇಖರ್, ವೈ. ಎಚ್. ಸೂಗೂರ, ಪಿ. ಎನ್. ಚೋೀಯಾಲ್, ಕೆ. ಬಾಲ್‌ಗೋಪಾಲನ್, ವಾಸುದೇವ ಕಾಮತ್, ಡಾ. ವಿ. ಜಿ. ಅಂದಾನಿ, ಎಂ. ಆರ್. ಬಾಳಿಕಾಯಿ, ಪಿ. ಎಸ್. ಪುಂಚಿತ್ತಾಯ, ಆರ್. ಎಂ. ಪಳನಿಯಪ್ಪನ್, ಪಿ. ಎಸ್. ಕಡೇಮನಿ, ಕೆ. ಕೆ. ಮಕಾಳಿ, ಎ. ಎಂ. ಪ್ರಕಾಶ, ಬಿ. ಕೆ. ಬಡಿಗೇರ, ವಿದ್ಯಾಧರ ಸಾಲಿ, ಶ್ರೀ ಎಂ ಮೋಹನ್, ದಯಾನಂದ ತಪಶೆಟ್ಟಿ, ಪ್ರಭಾಕರ್ ಎಲ್, ಬಿ. ಎಸ್. ಪಾಟೀಲ, ವಿಜಯರಾಜ ಬೋಧನಕರ್, ಅಂಬಾರಾಯ್ ಚಿನಮಳ್ಳಿ, ಬಾಬು ಜತ್ತಕರ್, ಕಮಲ್ ಅಹಮ್ಮದ, ಎಂ. ನಂದಬಸಪ್ಪ ವಾಡೆ, ಎಂ. ಜಿ. ಮಕಾನದಾರ್, ಕಂದನ್ ಜಿ, ಕೂಡಲ ಹಿರೇಮಠ, ರಾಘವೇಂದ್ರ ಪಾಟೀಲ, ಮಂಜುನಾಥ ವಾಲಿ, ಶ್ರೀಕಾಂತ ರಜಪೂತ, ರಮೇಶ ಚವ್ಹಾಣ ಇವರೆಲ್ಲರ ಕಲಾಕೃತಿಗಳು ಇರಲಿವೆ ಈ ಪ್ರದರ್ಶನವು ದಿನಾಂಕ 15-04-2026 ರಿಂದ 19-04-2026ರ ಮುಂಜಾನೆ 10 ರಿಂದ ಸಂಜೆ 5 ರ ವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ ಉಚಿತ ಪ್ರವೇಶವಿದೆ ಎಲ್ಲ ಕಲಾಸಕ್ತರು ಆಗಮಿಸಿ ಈ ಅಪರೂಪದ ಕಲಾ ಪ್ರದರ್ಶನ ವಿಕ್ಷಿಸಲು ಕ್ಯಾನವಾಸ್ ಆರ್ಟ್ ಫೌಂಡೇಶನ್ ಕಾರ್ಯದರ್ಶಿ ರಮೇಶ ಚವ್ಹಾಣ ಕೋರಿದ್ದಾರೆ.

# ಸಾಮಾಜಿಕ ಸಮಾನತೆ, ಮಹಿಳಾ ಶಿಕ್ಷಣಕ್ಕಾಗಿ ಶ್ರಮಿಸಿದ ಜ್ಯೋತಿಬಾ ಫುಲೆ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಜ್ಯೋತಿಬಾ ಫುಲೆ ಆದರ್ಶ ವ್ಯಕ್ತಿಗಳಾಗಿದ್ದರು, ಎಲ್ಲರಿಗೂ ಶಿಕ್ಷಣ ದೊರೆಯಲಿ ಎಂದು ಹಿಂದುಳಿದ ವರ್ಗ, ದೀನ ದಲಿತರಿಗೆ ಶಿಕ್ಷಣ ನೀಡಿದರು, ಸಾಮಾಜಿಕ ಸಮಾನತೆ ಮತ್ತು ಮಹಿಳಾ ಶಿಕ್ಷಣಕ್ಕಾಗಿ ಹೋರಾಡಿದವರು ಎಂದು ಶಿಕ್ಷಣ ಪ್ರೇಮಿ ಮಹಾನಿಂಗ ರಾಮದುರ್ಗ ಹೇಳಿದರು.

ಸಮೀಪದ ಕಡಪಟ್ಟಿ ಗ್ರಾಮದ ಮಾಳಿ ಸಮಾಜ ಹಾಗೂ ಶ್ರೀ ಜ್ಯೋತಿಬಾ ಫುಲೆ ಯುವಕ ಮಂಡಳ ಇವರ ಸಹಯೋಗದಲ್ಲಿ ನಡೆದ ಮಹಾತ್ಮ ಜ್ಯೋತಿಬಾ ಫುಲೆ ಅವರ 199 ನೆಯ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಜ್ಯೋತಿಬಾ ಫುಲೆ ಹಾಗೂ ಸಾವಿತ್ರಿಬಾಯಿ ಫುಲೆ ಆದರ್ಶ ದಂಪತಿಗಳಾಗಿದ್ದರು ಅವರ ಆದರ್ಶಗಳನ್ನು ನಾವು ಪಾಲಿಸಬೇಕು, ಅವರು ಮಾಡಿದ ಸಾಮಾಜಿಕ ಕಾರ್ಯಗಳನ್ನು ನಾವು ಎಂದಿಗೂ ಮರೆಯಬಾರದು, ಎಲ್ಲರೂ ಸೇರಿ ಸಮಾಜವನ್ನು ಒಗ್ಗೂಡಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಸಾಮಾಜಿಕ ಹೋರಾಟಗಾರ ಜಕ್ಕಪ್ಪ ಮೆಂಡಿಗೇರಿ ಮಾತನಾಡಿ,ಜ್ಯೋತಿಬಾ ಫುಲೆ ಅವರು ಶಿಕ್ಷಣ ಪ್ರೇಮಿಯಾಗಿದ್ದರು ಸಮಾಜದ ಪ್ರತಿಯೊಬ್ಬ ಮಹಿಳೆಯರಿಗೆ ಶಿಕ್ಷಣದೊರೆಯಲಿಎಂದುಹಗಲಿರುಳುದುಡಿದವರು,ಸ್ವತಂತ್ರ ಪೂರ್ವದಲ್ಲಿ ಮಹಿಳೆಯರಿಗೆ ಶಿಕ್ಷಣ ದೊರೆಯಬಾರದೆಂದು



ಫುಲೆ ದಂಪತಿಗಳಿಗೆ ಕಲ್ಲು ಹೊಡೆದರು, ಸಾಮಾಜಿಕವಾಗಿ ನಿಂದಿಸಿದರು ಆದರೆ ಅವರು ಎದೆಗುಂದದೆ ಮಹಿಳೆಯರಿಗೆ ಶಿಕ್ಷಣ ದೊರೆಯುವಂತೆ ಮಾಡಿದರು. ಇಂದು ನಾವೆಲ್ಲರೂ ಸುಶಿಕ್ಷಿತವಾಗಲು ಫುಲೆ ದಂಪತಿಗಳಿಗೆ ಕಾರಣ, ಅವರು ನಮ್ಮ ಮಾಳಿ ಸಮಾಜದವರು ಎಂದು ಹೇಳಲು ನಮಗೆ ಹೆಮ್ಮೆಯಾಗುತ್ತದೆ ಎಂದು ಎಂದು ಹೇಳಿದರು.

ಯುವ ನಾಯಕ ಮಹೇಶ್ ಬೆಳಗಲಿ ಮಾತನಾಡಿ, ಮಹಾತ್ಮ ಜ್ಯೋತಿಬಾ ಫುಲೆ ಅವರು ಭಾರತದ ಶ್ರೇಷ್ಠ ಸಮಾಜ ಸುಧಾರಕರು, ಸ್ತ್ರೀ ಶಿಕ್ಷಣದ ಹರಿಕಾರ ಮತ್ತು ಸಾಮಾಜಿಕ ಸಮಾನತೆಗಾಗಿ ಹೋರಾಡಿದ ಮಹಾನ್ ಚೇತನ. ದಲಿತರು, ಹಿಂದುಳಿದ ವರ್ಗಗಳು ಮತ್ತು ಮಹಿಳೆಯರ ಏಳಿಗೆಗಾಗಿ, ಶಿಕ್ಷಣಕ್ಕಾಗಿ ಅವರು ನೀಡಿದ ಕೊಡುಗೆ ಅಪಾರವಾದದ್ದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಗದೀಶ್ ಮಾಳಿ, ಹಣಮಂತ ಗುಲಗಂಜಿಕೊಪ್ಪ, ಮಹಾನಿಂಗ ಜಂಬಗಿ, ಬಸಪ್ಪ ಕೊಕಟನೂರ, ಶ್ರೀಕಾಂತ ರಾಮದುರ್ಗ, ಚನ್ನಪ್ಪ ಶಿರೋಳ, ಸಿದ್ಧಲಿಂಗ ಮಾಳಿ, ಆನಂದ ಬೊಮ್ಮಣ್ಣವರ, ಮಹಾದೇವ ಬೊಮ್ಮಣ್ಣವರ, ಮಂಜು ಮಾಳಿ, ರಾಜು ಬಡಕನವರ, ಮಹೇಶ್ ರಾವಳೋಜಿ , ಚಂದು ರಾವಳೋಜಿ, ಕಿರಣ ಮಾಳಿ, ಅಪ್ಪಣ್ಣ ಜಂಬಗಿ,ಬಸು ಜಂಬಗಿ,ಲಕ್ಕಪ್ಪ ರಾವಳೋಜಿ , ಸಂತೋಷ್ ಬೆಳಗಲಿ, ಮಹಾಂತೇಶ್ ಬೆಳಗಲಿ , ಬಸು ಜಾಲಿಬೇರಿ, ಮಹೇಶ್ ಬೆಳಗಲಿ, ಹರೀಶ್ ಕಲ್ಯಾಣಿ, ಪ್ರಕಾಶ್ ತಿಗಣಿಬಿದರಿ, ಕಾಡಪ್ಪ ಜಾಲಿಬೇರಿ, ಸಿದ್ದು ಮಾಳಿ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಪಾಲ್ಗೊಂಡಿದ್ದರು.



# ಬ್ಯಾಂಕ್‌ಗಳಲ್ಲಿ ಡಾ.ಅಂಬೇಡ್ಕರ್ ಜಯಂತಿ ಆಚರಿಸಲು ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಆರ್‌ಬಿಐ ಅಧೀನದಲ್ಲಿ ಬರುವ ಪಿಕೆಪಿ-ಎಸ್, ಡಿಸಿಸಿ ಬ್ಯಾಂಕ್, ಪೈನಾನ್ಸ್‌ಗಳಲ್ಲಿ ಏ.14ರಂದು ಡಾ. ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಆಚರಿಸುವಂತೆ ಆದೇಶ ನೀಡಬೇಕು ಎಂದು ಭೀಮ ಸೇನೆ ಕರ್ನಾಟಕ ಸಂಘಟನೆ ಪದಾಧಿಕಾರಿಗಳು ತಹಶೀಲ್ದಾರ್ ಕರೆಪ್ಪ ಬೆಳ್ಳಿ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ಭೀಮ್ ಸೇನೆ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಅನಿಲ ಹೊಸಮನಿ, ಸಮಾಜ ಹೋರಾಟಗಾರ ಹರ್ಷವರ್ಧನ ಪೂಜಾರಿ ಮಾತನಾಡಿ, ಸಿಂದಗಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಆರ್‌ಬಿಐ ಅಧೀನದಲ್ಲಿ ಬರುವ ಪಿಕೆಪಿ-ಎಸ್, ಡಿಸಿಸಿ ಬ್ಯಾಂಕ್, ಪೈನಾನ್ಸ್‌ಗಳಲ್ಲಿ ಏ.14 ರಂದು ಕಡ್ಡಾಯವಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಆಚರಿಸುವಂತೆ ಲಿಖಿತ ರೂಪದಲ್ಲಿ ಆದೇಶ ನೀಡಬೇಕು ಎಂದು ಮನವಿ ಮಾಡಿಕೊಂಡರು.

ಮನವಿ ಸ್ವೀಕರಿಸಿ ತಹಶೀಲ್ದಾರ ಕರೆಪ್ಪ ಬೆಳ್ಳಿ ಮಾತನಾಡಿ, ಆರ್‌ಬಿಐ ಅಧೀನದಲ್ಲಿ ಬರುವ ಆರ್ಥಿಕ ವ್ಯವಹಾರ ಸಂಸ್ಥೆಗಳಲ್ಲಿ ಏ.14ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಆದೇಶ ಆಚರಿಸುವಂತೆ ನೀಡಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ತಾಲೂಕಾಧ್ಯಕ್ಷ ಪ್ರಜ್ವಲ್ ಮಲ್ಲಾರಿ, ದ್ಯಾವಪ್ಪ ಕುದರಗುಂಡ, ಲಕ್ಷ್ಮಣ ಓಲೇಕಾರ ಸೇರಿದಂತೆ ಇತರರು ಇದ್ದರು.



# 42 ಸಾವಿರ ರೂ ಮೌಲ್ಯದ 14 ಕ್ವಿಂಟಲ್ ಅಕ್ಕಿವಶ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ಹಿರೇಬೇವನೂರ ಗ್ರಾಮದ ಹತ್ತಿರ ಟಂ ಟಂ ನಲ್ಲಿ ಸಾಗಿಸುತ್ತಿದ್ದ 50 ಕೆಜಿ ಒಂದು ಚೀಲದ 30 ಚೀಲಗಳನ್ನು ವಶ ಪಡಿಸಿಕೊಂಡಿದ್ದು ಅದರ ಅಂದಾಜು ಮೌಲ್ಯ 42 ಸಾವಿರ ರೂ ಇದೆ ಆಹಾರ ನೀರಿಕ್ಷಕ ಪರಮಾನಂದ ಹೂಗಾರ ಜಪ್ತಿ ಮಾಡಿದ್ದಾರೆ. ಇಂಡಿಯ ತಹಸೀಲ್ದಾರರು ನೀಡಿದ ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಿದ್ದು

ಟಂ ಟಂ ನಲ್ಲಿ ಸಾಗಿಸುತ್ತಿದ್ದ ಅಕ್ಕಿ ಸಮೇತ ಸಾಬೀರ ಬಾಗವಾನ ಮತ್ತು ಯೂನುಶ ಚಾಂದ ಬಾಗವಾನ ಸೋಲಾಪುರದ ಮೂಳೇಗಾವದವರನ್ನು ಬಂಧಿಸಿ ಅಕ್ಕಿ ವಶ ಮಾಡಿಕೊಂಡಿದ್ದಾರೆ. ಗ್ರಾಮೀಣ ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ನಿರಂತರ ರಕ್ತದಾನದಿಂದ ಆರೋಗ್ಯ ಉತ್ತಮ :ಡಾ.ಶಿವಾನಂದ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ರಕ್ತದಾನದಿಂದ ರಕ್ತ ಕಳೆದುಕೊಂಡ ರೋಗಿಗಳಿಗೆ ಅನುಕೂಲವಾಗುವ ಜತೆಗೆ ರಕ್ತದಾನ ಮಾಡುವವರ ಆರೋಗ್ಯ ಉತ್ತಮ ವಾಗಲಿದೆ ಎಂದು ಸ್ಪಂದನಾ ಆಸ್ಪತ್ರೆಯ ವೈದ್ಯ ಡಾ॥ ಶಿವಾನಂದ ಸೋನಾವನೆ ಹೇಳಿದರು.

ತಾಲೂಕಿನ ಸಾಲೋಟಗಿ ಗ್ರಾಮದಲ್ಲಿ ಶ್ರೀ ಶಿವಯೋಗೀಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ನಡೆದ 2014 ರಲ್ಲಿ ಸಾಲೋಟಗಿಯ ಶಿವಯೋಗೀಶ್ವರ ಮಾಧ್ಯಮಿಕ ಶಾಲೆಯಲ್ಲಿ ಓದಿದ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಗೆಳೆಯರ ಬಳಗ ಮತ್ತು ಶ್ರೀ ಶಿವಯೋಗೀಶ್ವರ ಜಾತ್ರಾ ಸಮಿತಿ ಸಹಯೋಗದಲ್ಲಿ ನಡೆದ ಉಚಿತ ಆರೋಗ್ಯ ತಪಾಸಣೆ ನೇತ್ರ ತಪಾಸಣೆ ಮತ್ತು ರಕ್ತದಾನ ಶಿಬಿರದಲ್ಲಿ ಮಾತನಾಡಿದರು.

ಪ್ರತಿಯೊಬ್ಬರು ರಕ್ತದಾನ ಮಾಡಬಹುದು. ಸಂಘಟನೆಗಳ ಮೂಲಕ ಯುವಕರು ರಕ್ತದಾನ ಮಾಡುವದರಿಂದ ರಕ್ತದ ಅಗತ್ಯ ಇರುವವರಿಗೆ ಅನುಕೂಲವಾಗಲಿದೆ. ರಕ್ತ ತಯಾರಿಸಲು ಸಾಧ್ಯವಿಲ್ಲ, ಮನುಷ್ಯನಿಂದಲೇ ಇನ್ನೊಬ್ಬರಿಗೆ ರಕ್ತವನ್ನು ನೀಡಬೇಕಾಗಿದೆ ಎಂದರು.

210 ಜನರ ಆರೋಗ್ಯ ತಪಾಸಣೆ, 42 ಜನರ ನೇತ್ರ ತಪಾಸಣೆ ಮತ್ತು 45 ಜನರಿಂದ ರಕ್ತದಾನ ಮಾಡಲಾಯಿತು.

ಆರೋಗ್ಯ ಇಲಾಖೆಯ ವೈ.ವಿ.ಪೂಜಾರಿ , ಡಾ.ಲಕ್ಷ್ಮೀಕಾಂತ ಮೇತ್ರಿ, ಎಸ್ಸೆಸ್ಸೆಲ್ಸಿ ಗೆಳೆಯರ ಬಳಗದ ಇಂದ್ರಕುಮಾರ ವಾಲಿಕಾರ, ಕೇದಾರನಾಥ ಅಕ್ಕಲಕೋಟ, ಶ್ರೀಶೈಲ ಕಾಳೆ, ಸಿದ್ದು ಬಿರಾದಾರ,ಗಂಗಾಧರ ಗುಳೆದ, ಶಿವಪ್ರಸಾದ ಹತ್ತರಕಿ, ದೇವಸ್ಥಾನ ಸಮಿತಿ ಅಧ್ಯಕ್ಷ ಸೋಮಯ್ಯ ಚಿಕ್ಕಪತ, ಮಲ್ಲನಗೌಡ ಪಾಟೀಲ, ಜೀತಪ್ಪ ಕಲ್ಯಾಣಿ, ವಿನೋದ ಗಾಣಿಗೇರ,ಮಲ್ಲಿಕಾರ್ಜುನ ಕಿವಡೆ , ಸರಕಾರಿ ಆಸ್ಪತ್ರೆಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮತ್ತಿತರಿದ್ದರು.

## ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ರಾಜ್ಯಾಧ್ಯಕ್ಷರಿಂದ ಬೆದರಿಕೆ ತಂತ್ರ। ಶಿಕ್ಷಕಿ ಜಯಶ್ರೀ ಬೆಣ್ಣಿ ಆರೋಪ

# ಶಿಕ್ಷಕರ ಸಂಘದ ಚುನಾವಣೆಯಲ್ಲಿ ಗೊಂದಲದ ವ್ಯವಸ್ಥೆ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: 2026 ರಿಂದ 31ರ ಅವಧಿಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಚುನಾವಣೆಗೆ ಸಂಬಂಧಿಸಿದಂತೆ ಗೊಂದಲದ ವ್ಯವಸ್ಥೆ ನಿರ್ಮಾಣವಾಗಿದೆ ಎಂದು ಶಿಕ್ಷಕಿ ಜಯಶ್ರೀ ಬೆಣ್ಣಿ ಆಕ್ರೋಶ ವ್ಯಕ್ತಪಡಿಸಿದರು.

ಸಿಂದಗಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಧಿಕ್ಕರಿಸಿ ಸಂಘವು ಈಗ ಪ್ರಕಟಪಡಿಸುತ್ತಿರುವ ಮತದಾರರ ಪಟ್ಟಿಯಲ್ಲಿ ಸೇವೆಗೆ ಸೇರಿದಾಗಿನಿಂದ ಈ ತನಕ ಸದಸ್ಯತ್ವ ಕಟಾವಣೆಯಾಗಿದ್ದ ಸದಸ್ಯರ ಹೆಸರನ್ನು ಮತದಾರ ಪಟ್ಟಿಯಿಂದ ಕೈಬಿಡು ಹುನ್ನಾರ ನಡೆದಿದೆ ಎಂದು ತಿಳಿದು ಬಂದಿದ್ದು, ಒಂದು ವೇಳೆ ಪಟ್ಟಿಯಲ್ಲಿ ಹೆಸರುಗಳನ್ನು ಸೇರಿಸದೇ ಚುನಾವಣೆ ಮಾಡಿದ್ದೇ ಆದಲ್ಲಿ ಇದು ಪ್ರಜಾಪ್ರಭುತ್ವದ ಒಂದು ವಿಕಾರ ರೂಪವನ್ನು ತಾಳುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ತಾಲೂಕು ಪ್ರಾಥಮಿಕ ಶಿಕ್ಷಕ ಸಂಘ ಸಿಂದಗಿ ಘಟಕದ ನಿರ್ದೇಶಕ ಸ್ಥಾನಗಳ ಚುನಾವಣೆ ಘೋಷಣೆಯಾಗಿದೆ ಎಂದು ರಾಜ್ಯ ಚುನಾವಣಾಧಿಕಾರಿ ಮೈಬೂಬಪಾಷಾ ಮೂಲಿಮನಿ ಆದೇಶ ಹೊರಡಿಸಿದ್ದಾರೆ. ತಾಲೂಕು ಘಟಕದ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಿದ್ದು, ಏ.11 ಮತ್ತ 12 ಕೊನೆಯ ದಿನಾಂಕವಾಗಿತ್ತು. ಆದರೆ ಇನ್ನುವರೆಗೂ ನಾಮಪತ್ರ ಸಲ್ಲಿಸಲು ಕಛೇರಿಗೆ ತೆರಳಿದರೆ ಕಛೇರಿ ಬೀಗ ಹಾಕಿದ್ದು, ಚುನಾವಣಾಧಿಕಾರಿ ಯಾರೆಂಬು ಮಾಹಿತಿ ಇಲ್ಲ. ಇದರ ಕುರಿತಾಗಿ ಸಂಬಂಧಿಸಿದ ಜಿಲ್ಲಾ ಮತ್ತು ತಾಲೂಕು ಘಟಕಕ್ಕೆ ದೂರವಾಣಿ ಮೂಲಕ ಕರೆ ಮಾಡಿದರೆ ಅವರಿಂದ ಯಾವದೇ ಉತ್ತರ ಮಾತ್ರ ಸಿಕ್ಕಿಲ್ಲ. ಈ ಎಲ್ಲ ಬೆಳವಣಿಗೆಯನ್ನು ಗಮನಿಸಿದರೇ ಉದ್ದೇಶಪೂರ್ವಕವಾಗಿ ದುರುದ್ದೇಶದಿಂದ ರಾಜ್ಯ, ಜಿಲ್ಲಾ ಮತ್ತು ತಾಲೂಕು ಘಟಕಗಳು ಶ್ಯಾಮಿಲಾಗಿ ಚುನಾವಣೆಯಲ್ಲಿ ಶಿಕ್ಷಕರು ಭಾಗಿಯಾಗದಂತೆ ನಡೆದುಕೊಳ್ಳುತ್ತಿದ್ದಾರೆ.

ಚುನಾವಣೆಗೆ ನಾಮಪತ್ರ ಸಲ್ಲಿಸಲು ಏ.12ರವರೆಗೆ ಮಾತ್ರ ಅವಕಾಶ ನೀಡಲಾಗಿತ್ತು. ಆದರೆ, ಇದುವರೆಗೆ ಚುನಾವಣಾ ವೇಳಾಪಟ್ಟಿ, ಚುನಾವಣಾ ನಡೆಯುವ ಸ್ಥಳ ಹಾಗೂ ಸಂಬಂಧಿತ ಕಚೇರಿಗಳ ಕುರಿತು ಯಾವುದೇ ಅಧಿಕೃತ ಪ್ರಕಟಣೆ ನೀಡಲಾಗಿಲ್ಲ. ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆಗೆ ಸಂಬಂಧಿಸಿದಂತೆ ಪ್ರಶ್ನೆಗಳು ಉದ್ಭವವಾಗಿವೆ. ಹಲವಾರು ಶಿಕ್ಷಕರು ಈ ಕ್ರಮವನ್ನು ಪ್ರಶ್ನಿಸಿ, ಸಮರ್ಪಕ ಮಾಹಿತಿ ನೀಡದೇ ನಾಮಪತ್ರ ಸ್ವೀಕಾರ ಪ್ರಾರಂಭಿಸಿರುವುದು ಸರಿಯಲ್ಲ ಎಂಬುದು ಶಿಕ್ಷಕರ ಅಸಮಾಧಾನಕ್ಕೆ ಕಾರಣವಾಗಿದೆ. ಶಿಕ್ಷಕರ ಸಂಘದ ಚುನಾವಣೆಯು ಪ್ರಜಾಸತ್ತಾತ್ಮಕ ವಿಧಾನದಲ್ಲಿ, ಸ್ಪಷ್ಟ ಮಾರ್ಗಸೂಚಿಗಳೊಂದಿಗೆ ನಡೆಯಬೇಕು ಎಂಬುದು ಶಿಕ್ಷಕರ ಒತ್ತಾಯ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು ಎಂದರು.

ಈ ವೇಳೆ ಶಿಕ್ಷಕ ಸಿ.ಬಿ.ಗಡಗಿ, ಶೋಭಾ ಚಿಗರಿ, ಬಸಯ್ಯ ಹಿರೇಮಠ ಮಾತನಾಡಿ, ಸಂಘದಲ್ಲಿ ಹಲವಾರು ಹುದ್ದೆಗಳನ್ನು ಸ್ವೀಕರಿಸಿ ಪ್ರಾಮಾಣಿಕವಾಗಿ ನಿರ್ವಹಣೆ ಮಾಡಿದ್ದೇವೆ. ಆದರೆ ಇಂತಹ ಪ್ರಸ್ತುತ ಸಂಘದ ಸದಸ್ಯರು ಲಜ್ಜೆಗೆಟ್ಟಿದ್ದಾರೆ. ಕಾನೂನು ಬಾಹಿರ ಚುನಾವಣೆ ನಡೆಸಲು ಮುಂದಾಗಿದ್ದು ಖೇದಕರ ಸಂಗತಿ. ಇನ್ನಾದರೂ ಇದನ್ನು ಕೈಬಿಟ್ಟು ಪ್ರಾಮಾಣಿಕವಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆ ನಡೆಯಬೇಕು. ನಮಗೆ ನ್ಯಾಯ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ರಾಯಪ್ಪ ಇವಣಗಿ, ಆಯ್.ಎಂ.ಎಲಿಗಾರ, ಎಸ್.ಎಮ್.ಕೂಡಗಿ, ಬಿ.ಎಸ್.ಹಿರೇಮಠ, ಎಂ.ಎಸ್.ಕಟಕದೊಂಡ, ಎಸ್.ಎಂ.ಮಸಳಿ, ಸುನಂದಾ ನಾರಾಯಣಕರ, ಶ್ರೀಶೈಲ ರೋಡಗಿ, ಗಂಗಾಧರ ತಾವರಖೇಡ, ಕಾಶೀನಾಥ ಪಾಟೀಲ, ನಾಗೇಶ ನಾಗೂರ, ಜಿ.ಎನ್.ನಡಕೂರ, ರೇವಣಸಿದ್ದ ಹೂಗಾರ ಸೇರಿದಂತೆ ಅನೇಕರು ಇದ್ದರು.

"ಸಿಎಂ ಸಿದ್ದರಾಮಯ್ಯ ಅವರು ನಮ್ಮ ಸಂಬಂಧಿಕರು, ಆಪ್ತರು ಮತ್ತು ನಮ್ಮ ಸಮಾಜದವರು ನಮ್ಮ ಮಾತು ಅವರು ಕೇಳುತ್ತಾರೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ಅವರು ನಮ್ಮನ್ನು ಹೆದರಿಸುವ ಜೊತೆಗೆ ನಿಮ್ಮನ್ನು ಎಲ್ಲಿ ಇಡಬೇಕು ಅಲ್ಲಿ ಇಡಲಾಗುವುದು ಎಂದು ಧಮಕಿ ಹಾಕುತ್ತಾರೆ. ಹಾಗಾಗಿ ಸಿಎಂ ಸಿದ್ದರಾಮಯ್ಯ ಅವರು ಇದನ್ನು ಗಮನಿಸಿ ತನಿಖೆ ಮಾಡಬೇಕು ಎಂಬುದು ಆಗ್ರಹ."

■ ಜಯಶ್ರೀ ಬೆಣ್ಣಿ
ಶಿಕ್ಷಕಿ

" ಮತದಾರ ಪಟ್ಟಿಯನ್ನು ತಾಲೂಕು ಕಾರ್ಯದರ್ಶಿಗಳ ಮೂಲಕ ಈಗಾಗಲೇ ಕಳುಹಿಸಲಾಗಿದೆ. ಅದರ ಮಾಹಿತಿ ಇನ್ನು ರಾಜ್ಯ ಘಟಕದಿಂದ ನಮಗೆ ಬಂದಿಲ್ಲ. ಬಂದರೆ ಅದಕ್ಕೆ ಸಂಬಂಧಿಸಿದ ವ್ಯವಸ್ಥೆಯನ್ನು ಮಾಡಿಕೊಡುತ್ತೇನೆ. ನನ್ನ ಅವಧಿಯಲ್ಲಿ ಶಿಕ್ಷಕರಿಗೆ ಸಂಬಂಧಿಸಿದ ಹಾಗೆ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. 2026-31ರ ಚುನಾವಣೆಗೆ ನಾನು ನಿಲ್ಲಲ್ಲ ಎಂದು ಈಗಾಗಲೇ ನಿರ್ಧರಿಸಿದ್ದೇನೆ. ನಮ್ಮ ಸಂಘದ ಕಾರ್ಯದರ್ಶಿಗಳು ಹೆದರಿ ಭಯದಿಂದ ಕರೆ ಸ್ವೀಕಾರ ಮಾಡುತ್ತಿಲ್ಲದಿರಬಹುದು. ಇದಕ್ಕೆ ಸಂಬಂಧಿತ ವಿಷಯ ರಾಜ್ಯ ಚುನಾವಣಾಧಿಕಾರಿಗಳ ಗಮನಕ್ಕೆ ಪತ್ರ ರವಾನೆ ಮಾಡುತ್ತೇನೆ."

■ ಆನಂದ ಭೂಸನೂರ
ಶಿಕ್ಷಕರ ಸಂಘದ ತಾಲೂಕಾಧ್ಯಕ್ಷರು


ಬೋರಮ್ಮ ಹೂಗಾರ 600/578 ಕಲಾ ವಿಭಾಗ ದ್ವಿತೀಯ


ಆಫ್ರಿನ್ ದಾಲರೋಟಿ 600/568 ಕಲಾ ವಿಭಾಗ ತೃತೀಯ


ಪ್ರಿಯಾಂಕಾ ಕಂಬೋಗಿ 600/560 ಕಲಾ ವಿಭಾಗ ತೃತೀಯ


ಭಾಗ್ಯಶ್ರೀ ಸಪೂರಿ 600/570 ವಾಣಿಜ್ಯ ವಿಭಾಗ ದ್ವಿತೀಯ


ಫಕ್ಕಿರಪ್ಪಾ ಮೆಟ್ಟಿನ 600/575 ವಾಣಿಜ್ಯ ವಿಭಾಗ ಪ್ರಥಮ


ಬಸವರಾಜ ತಳವಾರ 600/581 ಕಲಾ ವಿಭಾಗ ಪ್ರಥಮ


ಮಾರುತಿ ಘೋರ್ಪಡೆ 600/568 ವಾಣಿಜ್ಯ ವಿಭಾಗ ತೃತೀಯ

# ಎಂಎಚ್‌ಎಂ ಪಪೂ ಕಾಲೇಜಿಗೆ ಶೇ,98.77 ಅಮೋಘ ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆ-1 ಫಲಿತಾಂಶದಲ್ಲಿ ಜಿಲ್ಲೆಯ ಆಲಮಟ್ಟಿ ಎಸ್.ವಿ.ವಿ.ಸಂಸ್ಥೆಯ ಮಂಜಪ್ಪ ಹಡೇ9ಕರ ಸ್ಮಾರಕ ಸಂಯುಕ್ತ ಪದವಿಪೂರ್ವ (ಎಂಎಚೆಂ) ಕಾಲೇಜು ಹಿಂದೆಂದೂ ಕಂಡರಿಯದ ರೀತಿಯಲ್ಲಿ ಅತ್ಯತ್ತಮ ಫಲಿತಾಂಶ ದಾಖಲಿಸಿಕೊಂಡಿದೆ.

2025-2026 ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ-1 ಕಲಾ,ವಾಣಿಜ್ಯ ವಿಭಾಗದಲ್ಲಿ ಈ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಗಳಿಸುವ ಮೂಲಕ ಕಾಲೇಜಿಗೆ, ಸಂಸ್ಥೆಗೆ ಹಾಗೂ ಆಲಮಟ್ಟಿ ಗ್ರಾಮಕ್ಕೆ ಅಪಾರ ಕೀತಿ9 ತಂದಿದ್ದಾರೆ. ಕಲಾ ವಿಭಾಗದಲ್ಲಿ 92 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ 91 ವಿದ್ಯಾರ್ಥಿಗಳು ಪಾಸಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಪರೀಕ್ಷೆಗೆ ಕುಳಿತ್ತಿದ್ದ 31 ವಿದ್ಯಾರ್ಥಿಗಳಲ್ಲಿ 30 ಜನ ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಕಲಾ ವಿಭಾಗದ ಫಲಿತಾಂಶ ಶೇ, 98.91 ರಷ್ಟಾಗಿದೆ. ವಾಣಿಜ್ಯ ವಿಭಾಗದ ರಿಜಲ್ಟ್ ಶೇ,96.97 ರಷ್ಟಾಗಿದೆ. ಇವೆರಡೂ ವಿಭಾಗ ಸೇರಿ ಈ ಬಾರಿ ಕಾಲೇಜಿನ ಒಟ್ಟು ಫಲಿತಾಂಶ ಶೇ, 98.27 ರಷ್ಟು ದಾಖಲಾಗಿದೆ.

ಕಲಾ ವಿಭಾಗದಲ್ಲಿ 20 ಡಿಸ್ಟಿಂಕ್ಷನ್, 60 ಪ್ರಥಮ, 08 ದ್ವಿತೀಯ, 03 ತೃತೀಯ ದಜೆ9ಯಲ್ಲಿ ಹಾಗೂ ವಾಣಿಜ್ಯ ವಿಭಾಗದಲ್ಲಿ 15 ಡಿಸ್ಟಿಂಕ್ಷನ್,10 ಪ್ರಥಮ, 03 ದ್ವಿತೀಯ, 02 ತೃತೀಯ ಶ್ರೇಣಿಯಲ್ಲಿ ವಿದ್ಯಾರ್ಥಿಗಳು ಪಾಸಾಗಿದ್ದಾರೆ. ಕಲಾ,ವಾಣಿಜ್ಯ ಸೇರಿ ಒಟ್ಟು ಪರೀಕ್ಷೆಗೆ ಕುಳಿತ 123 ವಿದ್ಯಾರ್ಥಿಗಳಲ್ಲಿ 121 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕೇವಲ ಇಬ್ಬರು ವಿದ್ಯಾರ್ಥಿಗಳು ಮಾತ್ರ ಫೇಲ್ ಅಗಿದ್ದಾರೆ. ಕಲಾ ವಿಭಾಗದಲ್ಲಿ ಬಸವರಾಜ, ವಾಣಿಜ್ಯ ವಿಭಾಗದಲ್ಲಿ ಫಕ್ಕೀರಪ್ಪ ಕಾಲೇಜಿಗೆ ಪ್ರಥಮ:

ಕಲಾ ವಿಭಾಗದಲ್ಲಿ ಬಸವರಾಜ ತಳವಾರ 581 ಅಂಕ ಪಡೆದು ಕಾಲೇಜಿಗೆ ಪ್ರಥಮ ಬಂದರೆ ಬೋರಮ್ಮ ಹೂಗಾರ 578 ಅಂಕದೊಂದಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ಆಫೀ9ನ್ ದಾಲರೂಟ್ 568 ಅಂಕ ಗಳಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

# ರಾಜ್ಯದಲ್ಲಿ ಸಿದ್ದಸಿರಿ ಸೌಹಾರ್ದ ನಂ.1 ಸ್ಥಾನ :ಶಾಸಕ ಯತ್ನಾಳ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಸಿದ್ದಸಿರಿ ಸಹಕಾರಿ ಸೌಹಾರ್ದ ರಾಜ್ಯದಲ್ಲಿ ಸೌಹಾರ್ದದಲ್ಲಿ ಒಂದನೆಯ ಸ್ಥಾನದಲ್ಲಿದ್ದು ದೇಶದಲ್ಲಿ ಹತ್ತನೆಯ ಸ್ಥಾನದಲ್ಲಿದೆ. ಮುಂದಿನ ಎರಡು ವರ್ಷಗಳಲ್ಲಿ ಸಿದ್ದಸಿರಿ ನಿಮ್ಮೆಲ್ಲರ ಸಹಕಾರದಿಂದ ದೇಶದಲ್ಲಿಯೇ ಒಂದನೆಯ ಸ್ಥಾನಕ್ಕೆ ಬರಲಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಹೇಳಿದರು.

ತಾಲೂಕಿನ ನಾದ ಗ್ರಾಮದಲ್ಲಿ ಸಿದ್ದಸಿರಿ ಸೌಹಾರ್ದ ನೂತನ ಸಹಕಾರಿ ಸೌಹಾರ್ದ ಕಟ್ಟಡ ಉದ್ಘಾಟಿಸಿ ಮಾತನಾಡಿದರು.

ಸಾಲೋಟಗಿಯ ಜ್ಞಾನ ಯೋಗಾಶ್ರಮ ಶ್ರೀ ಸಿದ್ದೇಶ್ವರ ಗುರುದೇವಾಶ್ರಮದ ಸಂಗಮೇಶ್ವರ ಶ್ರೀಗಳು ಮಾತನಾಡಿ ಇಂಡಿ ತಾಲೂಕಿನಲ್ಲಿ ಸಿದ್ದಸಿರಿ ಸಂಸ್ಥೆಯ 15 ಶಾಖೆಗಳನ್ನು ಹೊಂದಿದ್ದು ನಾದ ತಾಂಬಾ ನೂತನ ಕಟ್ಟಡ ಸೇರಿ 8 ಶಾಖೆಗಳಿಗೆ ಸ್ವಂತ ಕಟ್ಟಡಗಳಿವೆ. ಇಂಡಿ ತಾಲೂನಿನಲ್ಲಿನ ಶಾಖೆಗಳಲ್ಲಿ 484 ಕೋಟಿ 88 ಲಕ್ಷ ಠೇವಣಿ ಹೊಂದಿವೆ. ಅಲ್ಲದೆ ಸಿದ್ಧಸಿರಿಯ ಎಲ್ಲ ಶಾಖೆಗಳನ್ನು ಒಳಗೊಂಡು 5220 ಕೋಟಿ 25 ಲಕ್ಷ ರೂಪಾಯಿ ಠೇವಣಿ ಇದೆ. ರಾಜ್ಯಾದ್ಯಂತ 212 ಶಾಖೆಗಳನ್ನು ಹೊಂದಿದ್ದು 5 ಸಾವಿರ ಯುವಕರಿಗೆ ಉದ್ಯೋಗ ನೀಡಲಾಗಿದ್ದು ಹೆಮ್ಮೆಯ ವಿಷಯ ಎಂದರು.

ನಾದ ಕೆಡಿ ಸಂಸ್ಥಾನ ಮಠದ ಶಿವಾನಂದ ಶಿವಾಚಾರ್ಯರು, ಗೋಳಸಾರದ ಅಭಿನವ ಪುಂಡಲಿಂಗ ಶಿವಯೋಗಿಗಳು ಪ್ರಭುಗೌಡ ದೇಸಾಯಿ, ನಂದಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಉಪ್ಪಾರ, ಜಗದೀಶ ಕ್ಷತ್ರಿ ಮಾತನಾಡಿದರು

ದಯಾಸಾಗರ ಪಾಟೀಲ, ಗ್ರಾ.ಪಂ ಅಧ್ಯಕ್ಷ ಸಿದರಾಯ ಐರೋಡಗಿ, ಮಲ್ಲನಗೌಡ ಪಾಟೀಲ ಗೋಳಸಾರ, ಹಣಮಂತರಾಯಗೌಡ ಪಾಟೀಲ ಶಿರಶ್ಯಾಡ, ಬಸವರಾಜ ಅಂಕದ, ಬಸವರಾಜ ಬಿರಾದಾರ, ಅನೀಲ ಅಳ್ಳಗಿ, ಸಿದ್ರಾಮಗೌಡ ಬಿರಾದಾರ, ಶ್ರೀಮಂತ ಕಸ್ಕಿ ಚಂದ್ರಶೇಖರ ತೆಗ್ಗೆಳ್ಳಿ, ಸಂಗನಬಸಪ್ಪ ಸಜ್ಜನ, ಶಿವಾನಂದ ಅಣ್ಣೆಪ್ಪನವರ, ನಾಗರಾಳ ಹುಲಿ ಬಸನಗೌಡ ಪಾಟೀಲ ಮತ್ತಿತರಿದ್ದರು.

# ಬಡತನದಲ್ಲಿ ಅರಳಿದ ಪ್ರತಿಭೆ ನೀಲಮ್ಮ ಬಿಸನಾಳ

■ ಉದಯರಶ್ಮಿ ದಿನಪತ್ರಿಕೆ


ಕಲಕೇರಿ: ಗ್ರಾಮದ ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ಕುಮಾರಿ ನೀಲಮ್ಮ ನಿಂಗಪ್ಪ ಬಿಸನಾಳ ದ್ವಿತೀಯ ಪಿಯುಸಿಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾಳೆ. ಅಸ್ಕಿ ಗ್ರಾಮದ ನಿಂಗಪ್ಪ ಬಿಸನಾಳ ಎಂಬ ಬಡ ರೈತರ ಮಗಳಾದ ಇವರು ಮೂಲತ ಕೃಷಿ ಕುಟುಂಬದಿಂದ ಬಂದಿದ್ದು ಇವರ ತಂದೆ ಪ್ರತಿದಿನವೂ ಕೂಲಿ ಮಾಡಿ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹಗಳಿರಳು ಶ್ರಮಿಸುತ್ತಿದ್ದಾರೆ. ಇವರ ಮಗಳಾದ ಕುಮಾರಿ ನೀಲಮ್ಮ ಬೀಸನಾಳ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ ಕನ್ನಡ 98 ಇಂಗ್ಲೀಷ 86 ಇತಿಹಾಸ 97 ಅರ್ಥಶಾಸ್ತ್ರ 95 ಸಮಾಜಶಾಸ್ತ್ರ 93 ರಾಜ್ಯಶಾಸ್ತ್ರ 100ಕೆ 100 ಅಂಕಗಳೊಂದಿಗೆ ಶೇಕಡಾ 94.83 ರಷ್ಟು ಅಂಕಗಳನ್ನು ಗಳಿಸಿ ಪರೀಕ್ಷಾ ಕೇಂದ್ರಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿರುತ್ತಾರೆ.

# ಸಂವಿಧಾನದ ಹಕ್ಕು ಉಳಿಸಿಕೊಳ್ಳಲು ಸಿಡಿದೇಳಿ:ಅಶೋಕ

ಕಲಬುರಗಿ: ಒಂದೇ ಚುನಾವಣೆ, ಸನಾತನ ಧರ್ಮ ಎಂದು ಹೇಳುವ ಮೂಲಕ ಅಧಿಕಾರ ನಡೆಸುತ್ತಿರುವವರ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕಾಗಿದೆ ಎಂದು ಖ್ಯಾತ ಚಲನಚಿತ್ರ ನಟ ಅಶೋಕ ಕರೆ ನೀಡಿದರು.

ವಿಶ್ವರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯುತ್ಸವದ ಅಂಗವಾಗಿ ನಗರದ ಹೀರಾಪುರ ಕ್ರಾಸ್ ನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಶುಕ್ರವಾರ ಸಂಜೆ ಆಯೋಜಿಸಿದ್ದ ಡಾ. ಅಂಬೇಡ್ಕರ್ ಅರಿವು ಉತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಅವರದ್ದು ವೈದಿಕ ಸನಾತನ ಧರ್ಮವಾದರೆ ನಮ್ಮದು ನೈತಿಕ ಸನಾತನ ಧರ್ಮವಾಗಬೇಕು. ಬಲಾಢ್ಯರು ಮತ್ತು ಬುದ್ಧಿವಂತರು ಒಂದಾಗಿ ಇಂದು ಅಧಿಕಾರ ನಡೆಸುತ್ತಿದ್ದು, ನಮ್ಮಲ್ಲಿನ ವಿದ್ಯಾವಂತ ಯುವಕರು ಸಂವಿಧಾನದ ಹಕ್ಕು ಉಳಿಸಿಕೊಳ್ಳಲು ಚಿಂತನೆ ಮಾಡಬೇಕು ಎಂದು ಅವರು ತಿಳಿಸಿದರು.

ಡಾ.ಬಾಬಾ ಸಾಹೇಬರು ಆಂದೋಲನ, ಅಧ್ಯಯನ, ಅಧಿಕಾರ ಹೇಳಿದ್ದರು. ಚರಿತ್ರೆ ಗೊತ್ತಿಲ್ಲದಿದ್ದರೆ ಚರಿತ್ರೆ ಕಟ್ಟಲು ಆಗುವುದಿಲ್ಲ. ಹೀಗಾಗಿ ಸ್ವಾತಂತ್ರ್ಯ, ಸಮಾನತೆ



ಉಳಿಸುವ ಅರಿವಿನ ಚಿಂತನೆ ನಡೆಸಬೇಕು ಎಂದು ಅವರು ತಿಳಿಸಿದರು. ಮುಖ್ಯ ಭಾಷಣಕಾರರಾಗಿದ್ದ ಬಿಎಸ್ಪಿ ರಾಜ್ಯ ಸಂಯೋಜಕ ಡಾ.ಹ.ರಾ.ಮಹೇಶ ಮಾತನಾಡಿ, ದಲಿತ, ಬಡ ಶೋಷಿತ ವರ್ಗ ಸೇರಿದಂತೆ ಎಲ್ಲ ದಮನಿತರ ಪರವಾಗಿ ಹೋರಾಟ ಮಾಡಿದ ಅಂಬೇಡ್ಕರ್ ಅವರನ್ನು ನಾವಿಂದು ಮರೆತಿದ್ದೇವೆ. ಎಸ್ಸಿ, ಎಸ್ಟಿ, ಸೆಡ್ಯೂಲ್ಡ್ ಟ್ರೈಬ್, ಓಬಿಸಿ ಸೇರಿದಂತೆ ಎಲ್ಲರೂ ಅಷ್ಟಿಷ್ಟು ಅಂಬೇಡ್ಕರ್ ಅವರನ್ನು ಓದಿಕೊಂಡಿದ್ದೇವೆ. ಆದರೆ ಅವರ ಬಗ್ಗೆ ಗೌರವ, ಅರಿವಿನ ಪ್ರಜ್ಞೆ ಎದ್ದು ಕಾಣುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.ಬೇರೆಯವರನ್ನು ದೂಷಿಸುವ, ಟೀಕಿಸುವ, ದ್ವೇಷಿಸುವ ಬದಲು ಅಂಬೇಡ್ಕರ್ ಅವರ ಅರಿವಿಗೆ ಕೈ ಜೋಡಿಸುವಂತೆ ಪ್ರೀತಿಯಿಂದ ಎಚ್ಚರಿಸುವ ಅವಶ್ಯಕತೆ ಇದೆ. ರಾಮರಾಜ್ಯದ ಬದಲು ಭೀಮರಾಜ್ಯ ಪ್ರಭುತ್ವ ಭಾರತದ ಬದಲು ಪ್ರಭುದ್ಧ ಭಾರತ (ಅಶೋಕನ ಕಾಲದ ಭಾರತ) ಕಟ್ಟುವ ಅಂಬೇಡ್ಕರ್ ಕನಸು ನನಸು ಮಾಡಬೇಕು ಎಂದು ತಿಳಿಸಿದರು.




# ಅಥಣಿಯಲ್ಲಿ 'ಅಕ್ಕಪಡೆ' ಯಿಂದ ವಿಶೇಷ ಜಾಗೃತಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಮಹಿಳೆಯರ ಸುರಕ್ಷತೆ ಹಾಗೂ ಸಾರ್ವಜನಿಕರಲ್ಲಿ ಕಾನೂನು ಅರಿವು ಮೂಡಿಸುವ ಉದ್ದೇಶದಿಂದ ಪಟ್ಟಣದ ಬಸ್ ನಿಲ್ದಾಣದಲ್ಲಿ 'ಅಕ್ಕಪಡೆ' (ಮಹಿಳಾ ಪೊಲೀಸ್ ತಂಡದ) ವತಿಯಿಂದ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುತ್ತಿರುವ ಕಿರುಕುಳ ತಡೆಗಟ್ಟಲು ಮತ್ತು ಪ್ರಯಾಣಿಕರಲ್ಲಿ ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಈ ಅಭಿಯಾನವನ್ನು ನಡೆಸಲಾಯಿತು.

ತುರ್ತು ಸಂದರ್ಭಗಳಲ್ಲಿ ಮಹಿಳೆಯರು ನೆರವು ಪಡೆಯಲು 112 ಸಹಾಯವಾಣಿಗೆ ಕರೆ ಮಾಡುವಂತೆ ಕ ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಿದರು.

ಪ್ರಯಾಣಿಕರ ಲಗೇಜುಗಳ ಭದ್ರತೆ, ಅಪರಿಚಿತರು ನೀಡುವ ತಿಂಡಿ–ತಿನಿಸುಗಳನ್ನು ಸೇವಿಸನೆ. ಅನುಮಾನಾಸ್ಪದ ವ್ಯಕ್ತಿಗಳು ಓಡಾಟ. ಕಂಡುಬಂದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಮನವಿಯನ್ನ ಅಕ್ಕಾ ಪಡೆಯ ತಂಡದ ಸದಸ್ಯರು ಮಾಡಿದ್ರು.

ಮಹಿಳೆಯರು ಮತ್ತು ಮಕ್ಕಳು ಸಾರ್ವಜನಿಕ ಸ್ಥಳಗಳಲ್ಲಿ ನಿರ್ಭಯವಾಗಿ ಸಂಚರಿಸಬೇಕು. ಯಾವುದೇ ತೊಂದರೆಯಾದಲ್ಲಿ ಸಂಕೋಚ ಪಡದೆ ಅಕ್ಕಪಡೆಯನ್ನು ಅಥವಾ ಹತ್ತಿರದ ಪೊಲೀಸ್ ಸಿಬ್ಬಂದಿಯನ್ನು ಸಂಪರ್ಕಿಸಬೇಕು ಎಂದು ತಂಡದ ಅಧಿಕಾರಿಗಳು ಈ ಸಂದರ್ಭದಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಾರಿಗೆ ಸಂಸ್ಥೆಯ ಅಧಿಕಾರಿಗಳು ಹಾಗೂ ನೂರಾರು ಪ್ರಯಾಣಿಕರು ಉಪಸ್ಥಿತರಿದ್ದರು.

ಅಕ್ಕಪಡೆಯ ಸದಸ್ಯರಾದ

ಭೀಮಪ್ಪ ಉಗಾರೆ, ಜ್ಯೋತಿ ಬೆಕ್ಕೇರಿ,ಕವಿತಾ ಕಾಡಗೌಡರ ತಂಡದಿಂದ ಈ ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು.

# ನಾಲತವಾಡ ಸರಕಾರಿ ಐಟಿಐ ಸಂಸ್ಥೆ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ನಾಲತವಾಡ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025–26ನೆಯ ಸಾಲಿನ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಿದೆ.

ಎಸ್ಸೆಸ್ಸೆಲ್ಸಿ ಪಾಸಾದ ಹಾಗೂ ಪಿಯುಸಿ ಅನುತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ ಹೊಸದಿಲ್ಲಿಯ ಎನ್ ಸಿವಿಟಿಯಿಂದ ಸಂಂ– ಯೋಜನೆಯಾದ 2 ವರ್ಷಗಳ ಮತ್ತು ಹೊಸದಾಗಿ ಟಾಟಾ ಉದ್ಯೋಗದಡಿ ಪ್ರಾರಂಭ ಮಾಡಲಾಗುವ ಪ್ರತಿಷ್ಠಿತ ಕೋರ್ಸ್ ಗಳ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಕಾಲೇಜ್ ಗೆ ಖುದ್ದಾಗಿ ಭೇಟಿ ಮಾಡಿ ಆಫ್ ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ವಿಶೇಷವಾಗಿ ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ಪ್ರಭಾರ ಪ್ರಾಚಾರ್ಯರಾದ ಪೂಜಪ್ಪ ಪೂಜಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ನಾಲತವಾಡ, ರಾಜ್ಯ ಕೈಗಾರಿಕಾ ತರಬೇತಿ ಸಂಸ್ಥೆ, ಮೊಬೈಲ್ ಸಂಖ್ಯೆ :9986123893,9008692270,9902835626 , 9980230710 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ನೇರ ಸಂದರ್ಶನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ವಿಜಯಪುರ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ವಿಜಯಪುರ ಇವರ ಸಹಯೋಗದಲ್ಲಿ, ಏ.15ರ ಬೆಳಿಗ್ಗೆ 10 ಗಂಟೆಗೆ ನಗರದ ಬಾಗಲಕೋಟ ರಸ್ತೆಯಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಅವರಣದಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಈ ಸಂದರ್ಶನದಲ್ಲಿ ಪ್ರತಿಷ್ಠಿತ ಕಂಪನಿಯಾದ SUZLON Energy Ltd. ಭಾಗವಹಿಸಿ, ತಮ್ಮಲ್ಲಿರುವ ಖಾಲಿ ಹುದ್ದೆಗಳಿಗೆ ಭಾರತದಾದ್ಯಂತ ಅಭ್ಯರ್ಥಿಗಳನ್ನುಆಯ್ಕೆ ಮಾಡಿಕೊಳ್ಳಲಿದೆ. ಡಿಪ್ಲೋಮಾ ಪದವಿಯಲ್ಲಿ ಮೆಕ್ಯಾನಿಕಲ್, ಎಲೆಕ್ಟ್ರಾನಿಕ್ಸ್, ಮತ್ತು ಕಮ್ಯುನಿಕೇಶನ್ ಆಟೋಮೊಬೈಲ್ ಪೂರೈಸಿದ ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಸಂದರ್ಶನದಲ್ಲಿ ತಮ್ಮ ಸ್ವ–ವಿವರ (Resume) ಮತ್ತು ವಿದ್ಯಾರ್ಹತೆ ಸಂಬಂಧಿತ ಮೂಲ ದಾಖಲಾತಿಗಳು ಹಾಗೂ ನೆರಳಚ್ಚು (ಝೆರಾಕ್ಸ್) ಪ್ರತಿಗಳೊಂದಿಗೆ ನೇರ ಸಂದರ್ಶನದಲ್ಲಿ ಹಾಜರಾಗುವಂತೆಯೂ ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಖುದ್ದಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರವನ್ನು ಸಂಪರ್ಕಿಸಬಹುದಾಗಿದೆ ಅಥವಾ ದೂರವಾಣಿ ಸಂಖ್ಯೆ 9741650568 ಹಾಗೂ 9945000793 ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ್ಯ ವಿವಾಹ ನಿಷೇಧ: ಸಾರ್ವಜನಿಕರಿಗೆ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಕ್ಷಯ ತೃತೀಯ ಪ್ರಯುಕ್ತ ಏ.20 ರಂದು ಜಿಲ್ಲೆಯಲ್ಲಿ ನಡೆಯುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಹಾಗೂ ವೈಯಕ್ತಿಕ ವಿವಾಹಗಳಲ್ಲಿ ಬಾಲ್ಯ ವಿವಾಹ ಜರುಗಿಸಿದಲ್ಲಿ, ಅದು ಬಾಲ್ಯವಿವಾಹ ನಿಷೇಧ ಕಾಯ್ದೆ–2006ರನ್ವಯ ಶಿಕ್ಷಾರ್ಹ ಅಪರಾಧವಾಗಿರುತ್ತದೆ ಎಂದು ಜಿಲ್ಲಾಡಳಿತ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ.ಜಿಲ್ಲೆಯ ದೇವಸ್ಥಾನಗಳು, ಕಲ್ಯಾಣ ಮಂಟಪಗಳು ಹಾಗೂ ಇತರ ಧಾರ್ಮಿಕ ಸ್ಥಳಗಳಲ್ಲಿ ಬಾಲ್ಯವಿವಾಹ ನಿಷೇಧ ಎಂಬ ಫಲಕವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ಬಾಲ್ಯ ವಿವಾಹವನ್ನು ನಡೆಸುವ, ನಿರ್ದೇಶಿಸುವ ಅಥವಾ ಪ್ರಚೋದಿಸುವ ಯಾವುದೇ ವ್ಯಕ್ತಿ ಕಾನೂನು ಪ್ರಕಾರ ಸಮಾನವಾಗಿ ಹೊಣೆಗಾರರಾಗುತ್ತಾರೆ.

ವಿವಾಹ ಸಮಾರಂಭವನ್ನು ನಡೆಸುವ ಪುರೋಹಿತರು, ಅದನ್ನು ಏರ್ಪಡಿಸುವ ಸಂಬಂಧಿಕರು, ಸುಗಮಗೊಳಿಸುವ ಆಯೋಜ–ಕರು ಸೇರಿದಂತೆ ಈ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲರೂ ಬಾಲ್ಯವಿವಾಹ ನಿಷೇಧ ಕಾಯ್ದೆಯ ಚೌಕಟ್ಟಿನಲ್ಲಿ ಶಿಕ್ಷೆಗೆ ಒಳಗಾಗುತ್ತಾರೆ. ಈ ಸಂಬಂಧ ಕ್ರಿಮಿನಲ್ ಪಿಟಿಷನ್ ಸಂಖ್ಯೆ 1605/2026ರಲ್ಲಿ ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು ಸ್ಪಷ್ಟ ಆದೇಶ ಹೊರಡಿಸಿದೆ.

ಜಿಲ್ಲೆಯಾದ್ಯಂತ ವಿವಿಧ ಇಲಾಖೆಗಳಲ್ಲಿನ ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳು ತೀವ್ರ ನಿಗಾ ವಹಿಸಿ ಪರಿಶೀಲನೆ ನಡೆಸುತ್ತಿದ್ದಾರೆ. ಬಾಲ್ಯ ವಿವಾಹ ನಡೆಯುತ್ತಿರುವ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ದೊರೆತಲ್ಲಿ, ತಕ್ಷಣವೇ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅಥವಾ ತುರ್ತು ಸೇವೆ 112, ಹತ್ತಿರದ ಪೊಲೀಸ್ ಠಾಣೆ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ತಿಳಿಸುವಂತೆ ಮನವಿ ಮಾಡಲಾಗಿದೆ. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿಡಲಾಗುತ್ತದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಕಾಲೇಜ್ ವಿದ್ಯಾರ್ಥಿನಿ ಚಿಕ್ಕು ಉತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: 2025–26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ ಡಿ ಕೋಟೆ ತಾಲೂಕಿನ ಸರ್ಕಾರಿ ಕಾಲೇಜಿನ ಮಕ್ಕಳು ಕೂಡ ಅದ್ವಿತೀಯ ಸಾಧನೆಗೈದಿದ್ದಾರೆ. ಖಾಸಗಿ ಕಾಲೇಜಿನ ಮಕ್ಕಳಿಗೆ ತಾವೇನು ಕಮ್ಮಿ ಇಲ್ಲ ಎಂಬುದನ್ನು ಹೆಚ್ ಡಿ ಕೋಟೆ ಪಟ್ಟಣದ ಬಾಲಕಿಯರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿನಿ ಚಿಕ್ಕು ತೋರಿಸಿದ್ದಾರೆ.

ಪ್ರಸಕ್ತ ವರ್ಷದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ 600 ಅಂಕಗಳಿಗೆ 524 ಅಂಕಗಳನ್ನು ಪಡೆದು ಕಾಲೇಜಿಗೆ ಹಾಗೂ ತಮ್ಮ ಹುಟ್ಟೂರಿಗೆ ಕೀರ್ತಿ ತಂದಿದ್ದಾರೆ. ಸರ್ಕಾರಿ ಕಾಲೇಜಿನಲ್ಲಿ ಓದಿದ್ದರೂ ಉತ್ತಮ ಅಂಕಗಳನ್ನೂ ಪಡೆದಿರುವುದನ್ನು ನೋಡಿ ಪೋಷಕರು ಸಂತೋಷಗೊಂಡಿದ್ದಾರೆ. ಮಗಳ ಓದಿನ ಸಕ್ಸಸ್ ಜರ್ನಿ ಬಗ್ಗೆ ಹೆಚ್ ಡಿ ಕೋಟೆ ಪಟ್ಟಣದ ಕಾಳಿದಾಸ ರಸ್ತೆಯ ರಾಮಮಂದಿರದಲ್ಲಿ ವಾಸವಿರುವ ತಂದೆ ಶಿವಣ್ಣ ಮತ್ತು ತಾಯಿ ಮಹಾದೇವಿ ಹರ್ಷವ್ಯಕ್ತಪಡಿಸಿದ್ದಾರೆ. ಮಕ್ಕಳಲ್ಲಿ ಓದುವ ಆಸಕ್ತಿ ಇದ್ದರೆ ಸರ್ಕಾರಿ ಅಥವಾ ಖಾಸಗಿ ಕಾಲೇಜುಗಳ ವ್ಯತ್ಯಾಸ ಬರುವುದಿಲ್ಲ. ಯಾವುದೇ ಕಾಲೇಜಿಗೆ ಸೇರಿದ್ದರೂ ಉತ್ತಮ ಅಂಕಗಳನ್ನು ಪಡೆಯುತ್ತಾರೆ. ಇದಕ್ಕೆ ನಮ್ಮ ಮಗಳೇ ನಿದರ್ಶನ ಎಂದು ಮಗಳ ಫಲಿತಾಂಶ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತಾರೆ. ಪ್ರಾಧ್ಯಾಪಕರು, ಸಂಬಂಧಿಕರು ಕರೆ ಮಾಡಿ ಶುಭಾಶಯ ಕೋರುತ್ತಿದ್ದಾರೆ. ಮಂಜುಶ್ರೀ ಮತ್ತುಕುಟುಂಬದವರುಕೂಡಚಿಕ್ಕುಸಾಧನೆಬಗ್ಗೆಹರ್ಷವ್ಯಕ್ತಪಡಿಸಿದ್ದಾರೆ.

# ಮನೆ ಬೀಗ ಮುರಿದು 2 ಲಕ್ಷ ನಗದು ಕಳವು

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ:ಮನೆ ಬೀಗ ಮುರಿದು 2 ಲಕ್ಷ ರೂಪಾಯಿ ನಗದು ಕಳವು ಮಾಡಿರುವ ಘಟನೆ ನಗರದ ಸಂತೋಷ ಕಾಲೋನಿಯ ವರದಾ ನಗರದಲ್ಲಿ ನಡೆದಿದೆ.ಶರಣಮ್ಮ ಸಂತೋಷ ಸಜ್ಜನ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 2 ಲಕ್ಷ ರೂ.ನಗದು ಹಣ ಕಳವು ಮಾಡಿಕೊಂಡು ಹೋಗಿದ್ದಾರೆ. ಇವರು ಸಂಬಂಧಿಕರ ಮನೆಯಲ್ಲಿ ಕಾರ್ಯಕ್ರಮ ಇದ್ದ ಪ್ರಯುಕ್ತ ಮನೆಗೆ ಬೀಗ ಹಾಕಿಕೊಂಡು ಶಹಾಪುರ ತಾಲ್ಲೂಕಿನ ಕನ್ಯಾಕೋಳೂರಿಗೆ ಹೋಗಿದ್ದಾಗ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಿಇಟಿ/ನಿಟ್ ತರಬೇತಿ: ವಿಜ್ಞಾನ ವಿದ್ಯಾರ್ಥಿಗಳಿಗೆ ವರ್ಷಪೂರ್ತಿ ತರಬೇತಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: 2025–26ನೇಯ ಸಾಲಿನಲ್ಲಿ ಸಿಇಟಿ/ನಿಟ್ ತರಬೇತಿಗಾಗಿ ಬೆಂಗಳೂರಿನ ಎಕ್ಸೆಲ್ ಅಕಾಡೆಮಿಯ ಸಹಯೋಗದೊಂದಿಗೆ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ವರ್ಷಪೂರ್ತಿ ತರಬೇತಿಯನ್ನು ನೀಡಲಾಗಿದೆ. ಪ್ರಸ್ತುತ ವಿದ್ಯಾರ್ಥಿಗಳು ಪರೀಕ್ಷಾ ಸಿದ್ಧತೆಯಲ್ಲಿ ತೊಡಗಿಕೊಂಡಿದ್ದಾರೆ ಎಂದು ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ ಹೇಳಿದರು.

ಸಿಂದಗಿ ಪಟ್ಟಣದ ಆರ್.ಡಿ.ಪಾಟೀಲ ಕಾಲೇಜಿನಲ್ಲಿ ಜರುಗಿದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಸಾಲಿನಲ್ಲಿ ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿಯಲ್ಲೂ ಉತ್ತಮ ಸಾಧನೆ ಮಾಡಿದ್ದಾರೆ. ಗಣೇಶ ಬಿರಾದಾರ ಎಂಬ ವಿದ್ಯಾರ್ಥಿ 600 ಅಂಕಗಳಿಗೆ 588 ಅಂಕಗಳನ್ನು ಪಡೆದುಕೊಳ್ಳುವ ಮೂಲಕ ಜಿಲ್ಲೆಗೆ 7ನೆಯ ಸ್ಥಾನ ಪಡೆದುಕೊಂಡು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾನೆ. ಕಾಲೇಜಿನ ಒಟ್ಟು ಫಲಿತಾಂಶ ಶೇ.94.24ರಷ್ಟಾಗಿದೆ. ನಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಕೇವಲ ಶೈಕ್ಷಣಿಕವಾಗಿ ಅಷ್ಟೇ ಅಲ್ಲದೇ ರೇಂಜರ್ ವಿವಿಧ ಕ್ರೀಡೆಗಳಲ್ಲಿಯೂ ಭಾಗವಹಿಸುವ ಮೂಲಕ ತಾಲೂಕು, ಜಿಲ್ಲಾ, ರಾಜ್ಯ ಮತ್ತು ರಾಷ್ಟ್ರ ಮಟ್ಟದವರೆಗೂ ಸಾಧನೆ ಮಾಡಿದ್ದಾರೆ. ಬೆಲ್ಟುಸ್ತಿಯಲ್ಲಿ ಗಣೇಶ ಎಂಬ ವಿದ್ಯಾರ್ಥಿ ರಾಜ್ಯಮಟ್ಟದಲ್ಲಿ ಸ್ಪರ್ಧಿಸಿ 3ನೆಯ ಸ್ಥಾನ ಪಡೆದುಕೊಂಡು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾನೆ ಎಂದರು.

ಈ ವೇಳೆ ಶ್ರೀ ಪದ್ಮರಾಜ ಮಹಿಳಾ ಪಪೂ ಕಾಲೇಜಿನ ಪ್ರಾಚಾರ್ಯ ವ್ಹಿ.ಡಿ.ಪಾಟೀಲ ಮಾತನಾಡಿ, ಶೈಕ್ಷಣಿಕ ಸಾಧನೆಯ ಜೊತೆಗೆ ಮಹಿಳಾ ಪಪೂ ಕಾಲೇಜಿನ ವಿದ್ಯಾರ್ಥಿನಿಯರು ಕ್ರೀಡೆಯಲ್ಲಿಯೂ ಸಹ ತಾಲೂಕು, ಜಿಲ್ಲಾ, ರಾಜ್ಯ, ರಾಷ್ಟ್ರ ಮಟ್ಟದವರೆಗೂ ಪ್ರತಿನಿಧಿಸಿ ಉತ್ತಮ ಪ್ರದರ್ಶನ ನೀಡಿ ಮೇಲುಗೈ ಸಾಧಿಸುತ್ತಿದ್ದಾರೆ. ಅದರಲ್ಲಿ ರಜಿಯಾಬೇಗಂ ಮ್ಯಾಗೇರಿ ಎನ್ನುವ ವಿದ್ಯಾರ್ಥಿನಿ ವ್ಹಾಲಿಬಾಲ್ ಪಂದ್ಯಾವಳಿಯಲ್ಲಿ ರಾಜ್ಯ, ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿ, ಝಾರ್ಖಂಡ ರಾಜ್ಯದಲ್ಲಿ ನಡೆಯುವ ಅಂತರ್‌ರಾಷ್ಟ್ರೀಯ ವ್ಹಾಲಿಬಾಲ್ ತಂಡಕ್ಕೆ ಆಯ್ಕೆಯಾಗಲು ತರಬೇತಿಗಾಗಿ ಮಹಾವಿದ್ಯಾಲಯ ವತಿಯಿಂದ ಕಳುಹಿಸಿಕೊಡಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕಾಲೇಜಿಗೆ ಪ್ರಥಮ ಹಾಗೂ ಜಿಲ್ಲೆಗೆ 7ನೆಯ ಸ್ಥಾನ ಪಡೆದ ವಿದ್ಯಾರ್ಥಿ ಗಣೇಶ ಬಿರಾದಾರ ಹಾಗೂ ವಾಣಿಜ್ಯ ವಿಭಾಗದ ಸುಪ್ರಿತಾ ಮಾವೂರ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ವಿಶ್ವನಾಥ ನಂದಿಕೋಲ, ಪಿ.ವ್ಹಿ.ಮಹಲಿನಮಠ, ಎಸ್.ಎಚ್.ಜಾದವ್, ಬಿ.ಬಿ.ಜಮಾದಾರ, ಪ್ರಸನ್ನಕುಮಾರ ಜೋಗುರ, ಜಿ.ಎ.ನಂದಿಮಠ, ನವೀನ ಶೆಳ್ಳಗಿ, ಚಂದ್ರು ಬಬಲೇಶ್ವರ ಸೇರಿದಂತೆ ಇತರರು ಇದ್ದರು.

# ಸ್ವಚ್ಛ ಭಾರತ ಕನಸು ಸಾಕಾರಗೊಳಿಸಲು ಪಕ್ಷಬೇಧ ಮರೆತು ಕೈಜೋಡಿಸಿ

## ಮುದ್ದೇಬಿಹಾಳ ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ ಮನವಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಸ್ವಚ್ಛ ಭಾರತ ಕನಸನ್ನು ಸಾಕಾರಗೊಳಿಸಲು ಪಕ್ಷಬೇಧ ಮರೆತು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ ಮನವಿ ಮಾಡಿದರು.

ಪಕ್ಷ ಮತ್ತು ವಿವಿಧ ದಲಿಪರ ಸಂಘಟನೆಗಳ ಸಹಭಾಗಿತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಪಟ್ಟಣದ ಅಂಬೇಡ್ಕರ್ ವೃತ್ತದ ಸ್ವಚ್ಛತಾ ಕಾರ್ಯಕ್ರಮದ ಬಳಿಕ ಅವರು ಮಾತನಾಡಿದರು.

ದೇಶದ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಗಾಗಿ ಭಾರತದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಜಿ ಅವರು ನೀಡಿದ ಕರೆಗೆ ಸ್ಪಂದಿಸಿ, ಪಟ್ಟಣದ ಅಂಬೇಡ್ಕರ್ ವೃತ್ತಗಳನ್ನು ಸ್ವಚ್ಛಗೊಳಿಸುವ ಕಾರ್ಯ ಉತ್ಸಾಹದಿಂದ ಮಾಡಿದ್ದೇವೆ. ಈ ಕಾರ್ಯದಿಂದ ಅಂಬೇಡ್ಕರ್ ವೃತ್ತ ಹೊಸ ಮೆರುಗು ಪಡೆದುಕೊಂಡಿದ್ದೂ ಅಲ್ಲದೇ ಸಾರ್ವಜನಿಕರಲ್ಲಿ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಸಹಕಾರಿಯಾಗಿದೆ ಎಂದರು.

ಡಿಎಸ್‌ಎಸ್ ಮುಖಂಡ ಹರೀಶ ನಾಟೀಕಾರ್ ಮಾತನಾಡಿ ಇದು ಕೇವಲ ಸ್ವಚ್ಛತಾ ಕಾರ್ಯವಲ್ಲ, ನಮ್ಮ ಸಮಾಜದ ಜವಾಬ್ದಾರಿ. ಇಂತಹ ಅಭಿಯಾನಗಳಿಂದ ಜನರಲ್ಲಿ ಸ್ವಚ್ಛತೆ ಬಗ್ಗೆ ಜಾಗೃತಿ ಹೆಚ್ಚುತ್ತದೆ. ಮುಂದೆಯೂ ಇಂತಹ ಕಾರ್ಯಗಳನ್ನು ನಿರಂತರವಾಗಿ ನಡೆಸುತ್ತೇವೆ ಎಂದರು.

ಈ ವೇಳೆ ಹಿರಿಯ ಪತ್ರಕರ್ತ ಪರಶುರಾಮ ಕೊಣ್ಣೂರ, ಬಿಜೆಪಿಯ ಪ್ರಮುಖರಾದ ಸಂಗನಗೌಡ ಪಾಟೀಲ, ಮಲ್ಲಣ್ಣ ತಂಗಡಗಿ, ರಾಜು ಬಳ್ಳೊಳ್ಳಿ, ಸಂಜು ಬಾಗೇವಾಡಿ, ಸಂಗಣ್ಣ ಹತ್ತಿ, ಡಿಎಸ್‌ಎಸ್ ಮುಖಂಡರಾದ ಯಮನಪ್ಪ ವಡ್ಡರ, ಶಾಂತು ನಾಯಕಮಕ್ಕಳ ಸೇರಿದಂತೆ ಹಲವರು ಇದ್ದರು.

**ಮಹಾನಾಯಕ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯ ಅಂಗವಾಗಿ ಪಟ್ಟಣದ ಬಾಬಾ ಸಹೇಬ ಅಂಬೇಡ್ಕರ್ ಅವರ ಮೂರ್ತಿಗೆ ಮಾಲಾರ್ಪಣೆ ಮಾಡುವ ಮೂಲಕ ಪಕ್ಷದ ವತಿಯಿಂದ ವಿಶೇಶ ಗೌರವ ಸಲ್ಲಿಸಲಾಗುತ್ತಿದೆ. ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿ.**

**■ ಜಗದೀಶ ಪಂಪಣ್ಣವರ. ಮಂಡಲ ಅಧ್ಯಕ್ಷರು, ಭಾರತೀಯ ಜನತಾ ಪಾರ್ಟಿ**

# ಮಹಿಳೆಯ ವೈಯಕ್ತಿಕ ಜೀವನದ ಬಗ್ಗೆ ಬರೆಯುವುದು ಸಲ್ಲದು :ವಿದ್ಯಾವತಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಮಹಿಳೆಯರು ಕವಿತೆ ಬರೆಯುತ್ತಾರೆ ಎಂಬುದೇ ಒಂದು ಬಂಡಾಯ, ಗಂಡಸರಿಗೆ ಸ್ವೀಕಾರ ಮನೋಭಾವ ಇರುತ್ತದೆ ಆದರೆ ಮಹಿಳೆ ಭಾವನಾ ಜೀವಿ ಕೆಲವು ಕವಿಗಳು ಮಹಿಳೆಯರ ವೈಯಕ್ತಿಕ ಜೀವನದ ಬಗ್ಗೆ ಬರೆಯುತ್ತಿರುವುದು ನಾಗರೀಕ ಸಮಾಜ ಒಪ್ಪುವಂತಹದಲ್ಲ ನೋವಿನ ಎಂದು ಹಿರಿಯ ಕವಯತ್ರಿ ವಿದ್ಯಾವತಿ ಅಂಕಲಗಿ ಅವರು ಹೇಳಿದರು.

ಅವರು ವಿಜಯಪುರ ನಗರದ ದರಾಬಾರ್ ಪ್ರೌಢ ಶಾಲೆ ಮೈದಾನದಲ್ಲಿ ಮೇ ಸಾಹಿತ್ಯ ಮೇಳ ವಿಜಯಪುರ ಬಳಗ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಆಶ್ರಯದಲ್ಲಿ ಏಪ್ರಿಲ್ 10ರಿಂದ 14ರ ವರೆಗೆ 5 ದಿನಗಳ ಕಾಲ ಚಂದ್ರಶೇಖರ ಹೊಸಮನಿ, ರಾಮಚಂದ್ರ ಸಾಂಗಲಿ ಗುರುಬಾಳ ನಾಮದಾರ, ಶ್ರೀರಂಗ ವೇದಿಕೆಯಲ್ಲಿ ಹಮ್ಮಿಕೊಂಡಿರುವ ಬಿಜಾಪುರ ಬುದ್ಧ, ಬಸವ, ಬಾಬಾಸಾಹೇಬ ಅಂಬೇಡ್ಕರ್ ಪುಸ್ತಕ ಮೇಳದಲ್ಲಿ 4 ನೇ ದಿನದ ಕವಿಗೋಷ್ಠಿ ಅಧ್ಯಕ್ಷತೆ

ವಹಿಸಿ ಅವರು ಮಾತನಾಡಿದರು.

ಜಾತ್ಯತೀತ ರಾಷ್ಟ್ರದವರಾದ ನಾವು ಹೆಂಡ್ಯಾನ ಹುಳದಂಗ ಜಾತಿ ಬಿಟ್ಟು ಮುಂದು ಹೋಗಲು ಆಗುತ್ತಿಲ್ಲ ಈ ಭಾವನೆ ಹೋಗಲಾಡಿಸಲು ಆಗುತ್ತಿಲ್ಲ ಗಡಿ ಭಾಷೆ ವೇಷ –ಭೂಷಣ ಮರೆತು ಭಾರತೀಯರಾದ ನಾವು ಒಂದಾಗಿ ಬಾಳಬೇಕಿದೆ ಎಂದು ಹೇಳಿದರು.

ಬುದ್ಧ ಬಸವ ಅಂಬೇಡ್ಕರ್ ಹೆಸರಲ್ಲಿ ಮೇ ಸಾಹಿತ್ಯ ಬಳಗದವರು ಪುಸ್ತಕ ಮೇಳ ಹಮ್ಮಿಕೊಂಡಿದ್ದು ಸ್ವಾಗತಾರ್ಹವಾಗಿದೆ

ಕೆಲವೊಂದು ಕಾರ್ಯಕ್ರಮಗಳಲ್ಲಿ ಮಹಿಳೆಯರಿಗೆ ಅವಕಾಶ ನೀಡುತ್ತಿಲ್ಲ ಆದ–'ರೆ ಸಮ್ಮೇಳನ ಸಂಘಟಕರು ಮಹಿಳೆಯ–ರಿಗಾಗಿ ಕವಿಗೋಷ್ಠಿ ಹಮ್ಮಿಕೊಂಡಿರುವುದು ಅಭಿನಂದನಾರ್ಹ ಎಂದರು.

ಕ' ವಿ ಗ' ೋ ಷ್ಠಿ ಂ ು' ು ಲ್ಲಿ ಕವಯತ್ರಿಯಾರಾದ ಭುವನೇಶ್ವರಿ ಕಾಂಬಳೆ, ಸವಿತಾ ಬಿ ಎನ್ ಡಾ ರೇಣುಕಾ ಕಮತರ ಜ್ಯೋತಿ ಮುರಾಳೆ ಡಾ ರೇಖಾ ಪಾಟೀಲ ಸುನೀತಾ ಮೋರೆ ಕವಿತೆ ವಾಚಿಸಿದರು.ಕಾರ್ಯಕ್ರಮದಲ್ಲಿ ಶಾರದಾ ಹೊಸಮನಿ, ಸವಿತಾ ವಾಘಮೋರೆ, ಮೀನಾಕ್ಷಿ ಸಿಂಗೆ, ನೀಲಾಂಬಿಕಾ ಬಿರಾದಾರ,

ಬಸವರಾಜ ಸೂಳಿಬಾವಿ, ಅನಿಲ ಹೊಸಮನಿ, ವೈ.ಎಚ್. ಲಂಬು, ಮಿಲನಕುಮಾರ ನಾಮದಾರ,

ಸವಿತಾ ವಗ್ಗರ, ಈಶ್ವರ ಅವಧಿ, ಸಾಬು ಚಲವಾದಿ, ಸುಲೋಚನಾ ಮಮದಾಪುರ, ನಾಗರಾಜ ಲಂಬು, ಕೆ ಎಂ ಕೂಡಲಗಿ, ವೈ ಎಸ್ ಗುಣಕಿ, ಸೋಮು ರಣದೇವಿ, ಸುರೇಶ ಬಿಜಾಪುರ, ಚೆನ್ನು ಕಟ್ಟಿಮನಿ, ಸಂಘರ್ಷ ಹೊಸಮನಿ, ಸಿದ್ದಲಿಂಗ ಬಾಗೇವಾಡಿ, ಭರತಕುಮಾರ ಎಚ್ ಟಿ, ಕಲ್ಲಪ್ಪ ಶಿವಶರಣ, ಲಾಯಪ್ಪ ಇಂಗಳೆ, ಸುರೇಶ ಜೀಬಿ, ಲಕ್ಷ್ಮಣ ಹಂದ್ರಾಳ, ಅಪ್ಪಸಾಹೇಬ ಯರನಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ಏಪ್ರೀಲ್ 14ರ ಮಂಗಳವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಬೆಳಿಗ್ಗೆ 10 ಗಂಟೆಗೆ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮ ನಡೆಯಲಿದೆ. ಅಂದು ಬೆಳಿಗ್ಗೆ 8.00 ಗಂಟೆಗೆ ಮಾಹಾನುಭಾವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಂತರ ಮಹಾನುಭಾವರ ಭಾವಚಿತ್ರದ ಮೆರವಣಿಗೆಯನ್ನು ವಿವಿಧ ಕಲಾ ತಂಡಗಳೊಂದಿಗೆ ಬುದ್ಧವಿಹಾರ ಜಲನಗರದಿಂದ ಪ್ರಾರಂಭಿಸಿ, ಜಿಲ್ಲಾ ನ್ಯಾಯಾಲಯದ ಮಾರ್ಗವಾಗಿ, ಕಂದಗಲ್ ಶ್ರೀ ಹನುಮಂತರಾಯರ ರಂಗಮಂದಿರದ ವರೆಗೆ ನಡೆಸಲಾಗುವುದು. ಬೃಹತ್ ಮತ್ತುಮಧ್ಯಮಕೈಗಾರಿಕೆಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಕಾರ್ಯಕ್ರಮಕ್ಕೆ ಉದ್ಘಾಟಿಸಲಿದ್ದಾರೆ. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಹಾಗೂ ಜಿಲ್ಲೆಯ ಶಾಸಕರು ಪಾಲ್ಗೊಳ್ಳಲಿದ್ದಾರೆ.

# ಬಾವಿಗೆ ಬಿದ್ದು ಯುವತಿ ಆತ್ಮಹತ್ಯೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಬಂದಾಳ ಗ್ರಾಮ ಎಂಬಲ್ಲಿ ಯುವತಿಯೊಬ್ಬಳು ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಏ.12ರಂದು ರಾತ್ರಿ ವೇಳೆ ನಡೆದಿದೆ.

ಮೃತರನ್ನು ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಬಂದಾಳ ಗ್ರಾಮದ ಜಯಶ್ರೀ ಭಗವಂತರಾಯ ಮಾಗಣಗೇರಿ (21) ಎಂದು ಗುರುತಿಸಲಾಗಿದೆ. ಏ.12ರಂದು ಮನೆಯಲ್ಲಿದ್ದು ಸಂಜೆ ವೇಳೆ ಮನೆಯಲ್ಲಿ ಕಾಣದೇ ನಾಪತ್ತೆಯಾಗಿದ್ದರು. ಹುಡುಕಾಡಿದಾದ ರಾತ್ರಿ ವೇಳೆ ಬಂದಾಳ ಸರಕಾರಿ ಶಾಲೆಯ ಸಮೀಪದ ಬಾವಿಯಲ್ಲಿ ಏ.13ರಂದು ಬೆಳಿಗ್ಗೆ ಆಕೆಯ ಮೃತದೇಹ ಪತ್ತೆಯಾಗಿದೆ. ಸ್ಥಳಕ್ಕೆ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭೇಟಿ ಪರಿಶೀಲನೆ ಮಾಡಿ ತನಿಖೆ ಪ್ರಾರಂಭಿಸಿದ್ದಾರೆ. ಮೃತ ದೇಹವನ್ನು ಅಗ್ನಿಶಾಮಕ ದಳದ ಸಿಬ್ಬಂದಿಗಳು ಹೊರ ತೆಗೆದಿದ್ದಾರೆ. ಕುಟುಂಬದ ಆಕ್ರಂದನ ಮುಗಿಲು ಮುಟ್ಟಿದೆ. ಈ ಪ್ರಕರಣ ಸಿಂದಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ. ಆತ್ಮಹತ್ಯೆಗೆ ಇನ್ನು ಕಾರಣ ತಿಳಿದು ಬರಬೇಕಿದೆ.

# ರಾತ್ರಿ ವೇಳೆ ಮನೆ ಕಳ್ಳತನ: ಇಬ್ಬರ ಕಳ್ಳರ ಬಂಧನ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ:ಕಾಳಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ 8 ಕಳ್ಳತನ ಪ್ರಕರಣಗಳನ್ನು ಪತ್ತೆ ಹಚ್ಚಿ 119 ಗ್ರಾಂ.ಬಂಗಾರದ ಒಡವೆ, 85 ಗ್ರಾಂ.ಬೆಳ್ಳಿ ಆಭರಣ, 28 ಸಾವಿರ ರೂ.ನಗದು ಸೇರಿ 18.46 ಲಕ್ಷ ರೂ.ಮೌಲ್ಯದ ಸ್ವತ್ತನ್ನು ವಶ ಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.ನಗರದ ಪೊಲೀಸ್ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ 8 ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಆಳಂದ ತಾಲ್ಲೂಕಿನ ಕೌಂಸರನಾಯಕ ತಾಂಡಾದ ಅಪ್ಪಾಜಿ ಗಂಗಾರಾಮ ಚವ್ಹಾಣ್ (22), ಹೊನ್ನಳ್ಳಿ ತಾಂಡಾದ ಮಿಥುನ್ ಲಕ್ಷ್ಮಣ ಚವ್ಹಾಣ್ (23) ಎಂಬುವವರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR